ಯುವ ವಾಣಿ



ಇಡೀ ವಿಶ್ವವೇ ಒಂದು ಅದ್ಭುತ ವ್ಯಾಯಾಮಶಾಲೆ. ಇಲ್ಲಿ ನಮ್ಮನ್ನು ನಾವೇ ಸಾಣೆ ಹಿಡಿದು ಸದೃಢಗೊಳಿಸಿಕೊಳ್ಳಬೇಕು.
– ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER – VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 210 | ಬುಧವಾರ : 04-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 210 | WEDNESDAY : 04-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# 'ಜಿಲ್ಲಾಸ್ಪತ್ರೆಗಾಗಿ ಲಿಂಗಸುಗೂರು ಸಂಪೂರ್ಣ ಬಂದ್'

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜೂ.3–**ಲಿಂಗಸುಗೂರಿಗೆ ಜಿಲ್ಲಾ ಆಸ್ಪತ್ರೆ ಘೋಷಣೆ ಮಾಡಿ ಕೈತಪ್ಪಿಸಿದ ಸರ್ಕಾರದ ನಡೆ ಖಂಡಿಸಿ ನಾನಾ ಸಂಘಟನೆಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳು ಕರೆ ನೀಡಿದ್ದ ಲಿಂಗಸುಗೂರು ಬಂದ್ ಮಂಗಳವಾರ ಸಂಪೂರ್ಣ ಯಶಸ್ವಿಯಾಯಿತು.

ಪಟ್ಟಣದ ಈಶ್ವರ ದೇವಸ್ಥಾನದಿಂದ ಬಸ್ ನಿಲ್ದಾಣದ ವೃತ್ತದ ವರೆಗೆ ಪ್ರತಿಭಟನಾ ಮೆರವಣ ಗೆ ನಡೆಸಿದರು. ಬಂದ್‌ನಿಂದಾಗಿ ಬೆಳಗ್ಗೆಯಿಂದಲೆ ವ್ಯಾಪಾರಸ್ತರು ಅಂಗಡಿ–ಮುಂಗಟ್ಟು, ಹೊಟೇಲ್ ಸೇರಿದಂತೆ ಬೀದಿ ಬದಿಯ ವ್ಯಾಪಾರಿಗಳು ಸ್ವಯಂ ಪ್ರೇರಿತರಾಗಿ ಬಂದ್‌ಗೆ ಬೆಂಬಲಿಸಿದರು.

ಇದರ ಜೊತೆಗೆ ಶಾಲಾ–ಕಾಲೇಜುಗಳು ಬಂದ್‌ಗೊಳಿಸಲಾಗಿತ್ತು. ಬಸ್ ನಿಲ್ದಾಣದ ವೃತ್ತದಲ್ಲಿ ಟೈರ್ ಬೆಂಕಿ ಹಚ್ಚಿ ಆಕ್ರೋಶ ಹೊರ ಹಾಕಿದರು. ಜೊತೆಗೆ ಬೆಳಗ್ಗೆ 10 ಗಂಟೆಯಿಂದಲೆ ಸಾರಿಗೆ ಬಸ್ಸುಗಳ ಸಂಚಾರವನ್ನು ಹೋರಾಟಗಾರರು ಬಂದ್‌ಗೊಳಿಸಿ 200 ಹಾಸಿಗೆಗಳ ಜಿಲ್ಲಾಸ್ಪತ್ರೆ ಲಿಂಗಸುಗೂರಿಗೆ ನೀಡಿ ಬಳಿಕ ಸಿಂಧನೂರಿಗೆ ವರ್ಗಾಯಿಸಿರುವುದು





ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್ ಮಾತನಾಡಿ, ಪಕ್ಷಕ್ಕಿಂತ ಜನರ ಹಿತಾಸಕ್ತಿ ಪ್ರಮುಖವಾಗಿದೆ. ಜಿಲ್ಲಾಸ್ಪತ್ರೆ ಸಿಂಧನೂರಿಗೆ ವರ್ಗ ಮಾಡಿರುವುದು ಸರ್ಕಾರದ ಕ್ರಮ ಸರಿಯಾದುದಲ್ಲ. ಕೂಡಲೇ ಇದರ ಕುರಿತು ಮಾಜಿ ಸಚಿವ



ಅಮರೇಗೌಡ ಪಾಟೀಲ್ ಬಯ್ಯಾಪುರು, ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪುರ ಸೇರಿದಂತೆ ಇತರೆ ಕಾಂಗ್ರೆಸ್ ಮುಖಂಡರು ಲಿಂಗಸುಗೂರಿಗೆ ಜಿಲ್ಲಾಸ್ಪತ್ರೆಗಾಗಿ ಹಮ್ಮಿಕೊಂಡಿರುವ ಹೋರಾಟಕ್ಕೆ ಬೆಂಬಲ ಸೂಚಿಸಿದ್ದಾರೆ. ಇದರ ಕುರಿತು ಜಿಲ್ಲಾ ಉಸ್ತುವಾರಿ ಸಚಿವರೊಂದಿಗೂ ಚರ್ಚೆ ಮಾಡಲಾಗುವುದು.

### ಆಸ್ಪತ್ರೆ ನೀಡುವರಿಗೂ ಹೋರಾಟ ನಿಲ್ಲದು ಶಾಸಕ ವಜ್ಜಲ್

ಪಟ್ಟಣದ ಬಸ್ ನಿಲ್ದಾಣದ ವೃತ್ತದಲ್ಲಿ ಬಹಿರಂಗೆ ಸಭೆ ನಡೆಸಿ ಮಾತನಾಡಿದ, ಶಾಸಕ ಮಾನಪ್ಪ ವಜ್ಜಲ್ ಮಾತನಾಡಿ, 200 ಹಾಸಿಗೆ ಆಸ್ಪತ್ರೆ ನಿರ್ಮಾಣಕ್ಕೆ ಭೂಮಿಯನ್ನು ಗುರುತಿಸಿ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಟೆಂಡರ್ ಕರೆಯುವ ಹಂತದಲ್ಲಿ ಏಕಾಏಕಿ ಸಿಂಧನೂರಿಗೆ ವರ್ಗಾಯಿಸಿದ್ದಾರೆ. ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿ ಇದೆ. ಅದು ತನಗೆ ಇಷ್ಟಬಂದಂತೆ ಅಧಿಕಾರಿ ಚಲಾಯಿಸಿದೆ. ಇದಕ್ಕೆ ಲಿಂಗಸುಗೂರು ಮೀಸಲು ಕ್ಷೇತ್ರವಾಗುವ ಜೊತೆಗೆ ನಾನು ಬಿಜೆಪಿ ಶಾಸಕನಾಗಿರುವುದರಿಂದ ಸರ್ಕಾರ ಈ ಕ್ರಮ ಕೈಗೊಂಡಿದೆ. ಆದರೆ ಇದರಿಂದ ಎದೆಗುಂದದೆ 200ರ ಬದಲು 250 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಗೆ ಮಂಜೂರು ಆಗುವವರೆಗೂ ಕ್ಷೇತ್ರದ ಜನರು ಹಾಗೂ ದಲಿತ, ಕನ್ನಡ, ಪ್ರಗತಿಪರ ಸಂಘಟನೆಗಳೊಂದಿಗೆ ಹೋರಾಟಕ್ಕಿಳಿಯುವುದಾಗಿ ಹೇಳಿದರು.

### ಲಿಂಗಸುಗೂರು ಜಿಲ್ಲಾ ಕೇಂದ್ರವಾಗಲಿ

ಆರ್.ಮಾನಸಯ್ಯ ಮಾತನಾಡಿ, ಲಿಂಗಸುಗೂರಿಗೆ ಸರ್ಕಾರ ಮಂಜೂರಿ ಮಾಡಿದ 200 ಹಾಸಿಗೆಗಳ ಜಿಲ್ಲಾ ಆಸ್ಪತ್ರೆಯನ್ನು ಸಿಂಧನೂರಿಗೆ ವರ್ಗಾವಣೆ ಮಾಡಿರುವುದು ಲಿಂಗಸುಗೂರು ಹಾಗೂ ಸಿಂಧನೂರು ಜನರುಗಳ ಮದ್ಯೆ ವಿರಸ, ದ್ವೇಷ, ಅವಿಶ್ವಾಸ, ಅಪನಂಬಿಕೆ ಬೆಳೆಯುವಂತೆ ಮಾಡಿದೆ. ಇದು ವಿಕೃತ, ನೀಚ ರಾಜಕಾರಣ ಪ್ರವೃತ್ತಿಯಾಗಿದೆ. ಇದಕ್ಕೆ ಕಡಿವಾಣ ಹಾಕಬೇಕೆಂದರೆ ಹೋರಾಟಗಾರರು ಜನರಿಗೆ ಸೂಕ್ತ ತಿಳುವಳಿಕೆ ನೀಡಬೇಕು ಎಂದು ಆಗ್ರಹಿಸಿದರು. ಲಿಂಗಸುಗೂರಿನಿಂದ ವರ್ಗಾವಣೆಯಾಗಿರುವ 200 ಹಾಸಿಗೆಗಳ ಸಾಮಾರ್ಥ್ಯದ ಆಸ್ಪತ್ರೆ ಮರಳಿ ಲಿಂಗಸುಗೂರಿಗೆ ನೀಡಬೇಕು ಇಲ್ಲದೇ ಹೋದರೆ ಲಿಂಗಸುಗೂರು ಜಿಲ್ಲಾ ಕೇಂದ್ರ ಎಂದು ಘೋಷಣೆ ಮಾಡಬೇಕು. ಇದಕ್ಕೆ ಬೇಕಾದ ಹೋರಾಟ ತಯಾರಿ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

ತಾಲೂಕಿಗೆ ಆಗಿರುವ ಅನ್ಯಾಯದ ವಿರುದ್ದ ಪಕ್ಷಾತೀತವಾಗಿ ಹಾಗೂ ಸಂಘಟನೆಗಳ ಜೊತೆಗೆ ನಿಲ್ಲುವುದಾಗಿ ಹೇಳಿದರು.

ಹಾಲಿ ಮಾಜಿ ಶಾಸಕರ ವಿರುದ್ದ ಘೋಷಣೆ : 200 ಹಾಸಿಗೆಗಳ ಜಿಲ್ಲಾಸ್ಪತ್ರೆಗಾಗಿ ಕರೆ ನೀಡಿದ್ದ ಬಂದ್ ವೇಳೆ ಹಾಲಿ ಶಾಸಕ ಮಾನಪ್ಪ ವಜ್ಜಲ್ ಹಾಗೂ ಮಾಜಿ ಶಾಸಕ ಡಿ.ಎಸ್.ಹೂಲಗೇರಿ ವಿರುದ್ದ ಧಿಕ್ಕಾರದ ಘೋಷಣೆಗಳನ್ನು ಮೊಳಗಿಸಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾ ಸ್ಥಳಕ್ಕೆ ಮದ್ಯಾಹ್ನ ಆಗಮಿಸಿದ ಸಹಾಯಕ ಆಯುಕ್ತ ಬಸವಣೆಪ್ಪ ಕಲಶೆಟ್ಟಿಯವರ ಮೂಲಕ ಮುಖ್ಯಮಂತ್ರಿಗಳಿಗೆ ಬರೆ ಮನವಿಯನ್ನು ಸಲ್ಲಿಸಿದರು.

ಬಂದ್ ಹೋರಾಟದಲ್ಲಿ ರೈತ ಸಂಘ, ದಲಿತ ಸಂಘಟನೆ, ಕನ್ನಡಪರ ಸಂಘಟನೆಗಳು, ಪ್ರಗತಿಪರ ಹಾಗೂ ನಾನಾ ಜಾತಿ ಸಮುದಾಯಗಳ ಸಂಘಟನೆಗಳ ಮುಖಂಡರುಗಳಾದ ಹನುಮಂತಪ್ಪ ಕುಣೆಕೆಲ್ಲೂರು, ನ್ಯಾಯವಾದಿಗಳ ಸಂಘದ ಅಧ್ಯಕ್ಷ ಭೂಪನಗೌಡ 2ನೇ ಪುಟಕ್ಕೆ

# ಖಾಸಗಿ ಶಾಲೆಯ ಜಾಗ ಕಬಳಿಸಲು ಯತ್ನ: ಕ್ರಮಕ್ಕೆ ಡಿಕೆಶಿ ಸೂಚನೆ

**ಬೆಂಗಳೂರು,ಜೂ.3–** ಕಾಂಗ್ರೆಸ್ ನಾಯಕ 'ರೊಬ್ಬರು ಖಾಸಗಿ ಶಾಲೆಯ ಜಾಗವನ್ನು ಕಬಳಿಸಲು ಯತ್ನಿಸಿರುವುದರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಗರದ ವಿದ್ಯಾರಣ್ಯಪುರದ ಎಂ.ಎಸ್. ಪಾಳ್ಯದ ಶ್ರೀ ಶಾರದಾ ವಿದ್ಯಾನಿಕೇತನ ಶಾಲೆಯ ಶಿಕ್ಷಕರು, ಆಡಳಿತ ಮಂಡಳಿ, ಪೋಷಕರು ಹಾಗೂ ವಿದ್ಯಾರ್ಥಿಗಳು ಸದಾಶಿವನಗರದ ಡಿ.ಕೆ.ಶಿವಕುಮಾರ್‌ರವರ ಮನೆಗೆ ಭೇಟಿ ನೀಡಿ ದೂರು ನೀಡಿದರು.

ಧನಂಜಯ ಎಂಬುವವರು ಅಕ್ರಮವಾಗಿ ಶಾಲೆಯನ್ನು ಕಬ್ಬ ಮಾಡಿಕೊಂಡಿದ್ದು, ಗೂಂಡಾಗಳನ್ನು ಬಳಸಿ ವಿದ್ಯಾರ್ಥಿಗಳನ್ನು ಮತ್ತು ಶಿಕ್ಷಕರನ್ನು ಶಾಲೆಯ ಆವರಣದಿಂದ ಹೊರಹಾಕಿದ್ದಾರೆ. ಸಿಬ್ಬಂದಿಗಳ ಮೇಲೆ



ದೌರ್ಜನ್ಯ ನಡೆಸಿದ್ದಾರೆ. ಈಗಲೂ ಅವರು ಶಾಲೆಯ ಆವರಣವನ್ನು ಅತಿಕ್ರಮಿಸಿ ಕೊಂಡಿದ್ದಾರೆ ಎಂದು ದೂರಿದ್ದರು.

ಪೋಷಕರು ಈ ವೇಳೆ ಅತಿಕ್ರಮಣಕಾರರಿಂದಾಗುತ್ತಿರುವ ತೊಂದರೆಗಳ ಬಗ್ಗೆ ವಿವರಿಸಿದರು. ತಕ್ಷಣವೇ ಡಿ.ಕೆ.ಶಿವ ಕುಮಾರ್ ಡಿಡಿಪಿಐ, ಪೊಲೀಸ್ ನಗರಾ ಯುಕ್ತರು ಹಾಗೂ ಹಿರಿಯ ಅಧಿಕಾರಿ ಗಳಿಗೆ ಕರೆ ಮಾಡಿದರು.

ಡಿಡಿಪಿಐ ಫೋನ್‌ನಲ್ಲಿ ಮಾತನಾಡುವ ವೇಳೆ ಈ ಪ್ರಕರಣ ತಮ್ಮ ಗಮನಕ್ಕೆ ಬಂದಿಲ್ಲ ಎಂದು ಹೇಳುವ ಪ್ರಯತ್ನ ಮಾಡಿ ದರು. ಇದರಿಂದ ಸಿಟ್ಟಾದ ಡಿ.ಕೆ.ಶಿವಕು ಮಾರ್, 200 ಜನ ನನ್ನ ಮನೆಯ ಬಳಿ ಬಂದು ಸಮಸ್ಯೆ ಹೇಳಿಕೊಳ್ಳುತ್ತಿದ್ದಾರೆ. ಗೊತ್ತಿಲ್ಲ ಎಂದರೆ ಹೇಗೆ?, ತಕ್ಷಣವೇ ಖುದ್ದಾಗಿ ಸ್ಥಳಕ್ಕೆ ಭೇಟಿ ನೀನೀಬೇಕು. ಮಧ್ಯಾಹ್ನದ ನಡುವೆ ನನಗೆ ವಾಸ್ತವದ ವರದಿ ನೀಡಬೇಕು ಎಂದು ಹೇಳಿದರು.

ಅತಿಕ್ರಮಣ ಮಾಡಿರುವ ಧನಂಜಯ ಎಂಬ ವ್ಯಕ್ತಿ ಕಾಂಗ್ರೆಸ್ ನಾಯಕ ಎಂದು ಹೇಳಿ ಕೊಳ್ಳುತ್ತಿದ್ದಾರೆ ಎನ್ನುತ್ತಿದ್ದಂತೆ 2ನೇ ಪುಟಕ್ಕೆ

# ದೇವದುರ್ಗದಲ್ಲಿ 'ಹಸಿರು ಉಸಿರು ಅಭಿಯಾನ': ಪರಿಸರ ಸಂರಕ್ಷಣೆಗೆ ಪುರಸಭೆ ಕರೆ

ಯುವ ಮಾರ್ಗ ಸುದ್ದಿ

**ದೇವದುರ್ಗ,ಜೂ.3–**ಪರಿಸರವನ್ನು ಉಳಿಸಿ, ಬೆಳೆಸುವುದು ಮತ್ತು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ದೇವದುರ್ಗ ಪುರಸಭೆ ಆಡಳಿತದ ಮುಖ್ಯ ಅಧಿಕಾರಿ ಕೆ. ಹಂಪಯ್ಯ ಅವರು ಕರೆ ನೀಡಿದರು.

ಕನ್ನಡ ಸಾಹಿತ್ಯ ಪರಿಷತ್ತು, ದೇವದುರ್ಗ ಪ್ರಗತಿಪರ ಒಕ್ಕೂಟ, ದಲಿತಪರ ಸಂಘಟನೆಗಳು, ಕನ್ನಡಪರ ಸಂಘ ಸಂಸ್ಥೆಗಳು, ನಾಗರಿಕ ವೇದಿಕೆ ಹಾಗೂ ವಿವಿಧ ಸಂಘಟನೆಗಳ ಮನವಿ ಮೇರೆಗೆ ಪುರಸಭೆ ಆಡಳಿತವು 'ಹಸಿರು ಉಸಿರು ಅಭಿಯಾನ'ಕ್ಕೆ ಚಾಲನೆ ನೀಡಿದ ಸಂದರ್ಭದಲ್ಲಿ ಅವರು ಮಾತನಾಡಿದರು.

"ಮನೆಗೊಂದು ಮರ, ಊರಿಗೊಂದು ವನ" ಎಂಬಂತೆ ಅರಣ್ಯ ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಪರಿಸರದ ಬಗ್ಗೆ ಕಾಳಜಿ





ವಹಿಸುವುದು ಅಗತ್ಯ ಎಂದರು.

ಶಾಲಾ–ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳ ಆವರಣಗಳಲ್ಲಿ ಮರ–ಗಿಡಗಳನ್ನು ಬೆಳೆಸುವುದು ಇಂದಿನ ಪರಿಸ್ಥಿತಿಗೆ ಅತಿ ಮುಖ್ಯವಾಗಿದೆ. ಅರಣ್ಯ ನಾಶ ಮತ್ತು ಪರಿಸರ ನಾಶದಿಂದ ವಾತಾವರಣದಲ್ಲಿ ಏರುಪೇರು ಉಂಟಾಗುತ್ತದೆ. ಆದ್ದರಿಂದ, ಎಲ್ಲರೂ ಪರಿಸರ ಪ್ರೇಮಿಗಳಾಗಿ ಪರಿಸರವನ್ನು ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಅವರು ಹೇಳಿದರು.

ಈ ಕಾರ್ಯದಲ್ಲಿ ಸಂಘ–ಸಂಸ್ಥೆಗಳು ಮತ್ತು ಸಮುದಾಯಗಳು ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಅವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪುರಸಭೆ ವ್ಯವಸ್ಥಾಪಕರಾದ ಗಂಗಾಧರ್ ಡೇ ನಲ್, ಕಾರ್ಯಾಲಯದ ಸಿಬ್ಬಂದಿಗಳಾದ ಅನಿಲ್ ಕುಮಾರ್ ಬಲಿದವ, ಅಂಬಿಕಾ, ಶ್ರುತಿ ಶೆಟ್ಟಿ, ಪಾರ್ವತಿ ಪಾರ್ವತಿ ಸೇರಿದಂತೆ ವಿವಿಧ ಸ್ವಸಹಾಯ ಗುಂಪುಗಳ ಮಹಿಳೆಯರು ಉಪಸ್ಥಿತರಿದ್ದರು.

# ಅಲ್–ಹಿರಾ ಪಬ್ಲಿಕ್ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವ!

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.3–**ಪಟ್ಟಣದ ಅಲ್–ಹಿರಾ ಅಲ್ಪಸಂಖ್ಯಾತ ಶಾಲೆಯಲ್ಲಿ 2025–26ನೇ ಶೈಕ್ಷಣಿಕ ವರ್ಷದ ಪ್ರಾರಂಭದ ಅಂಗವಾಗಿ ಮಂಗಳವಾರ ಭಾವಪೂರ್ಣ ಸ್ವಾಗತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಶಾಲೆಯ ಅಧ್ಯಕ್ಷರಾದ ಸೈಯದ್ ಅಕ್ಬರ್ ಪಾಷಾ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ, ವಿದ್ಯಾರ್ಥಿಗಳು ಶಾಲೆಯಲ್ಲಿ ಗುರುಗಳಿಂದ ಜ್ಞಾನವನ್ನು ಪಡೆದುಕೊಂಡು ಜೀವನದಲ್ಲಿ ಉನ್ನತ ವ್ಯಕ್ತಿಗಳಾಗಿ ಸಮಾಜಕ್ಕೆ ಹಾಗೂ ದೇಶಕ್ಕೆ ತಮ್ಮ ಸೇವೆಯನ್ನು ಸಲ್ಲಿಸಬೇಕು ಎಂದು ನುಡಿದರು.

ಶಾಲೆಯ ಕಾರ್ಯದರ್ಶಿ ಶೇಕ್ ಫರೀದ್ ಉಮರಿ ಕೂಡ ಉಪಸ್ಥಿತರಿದ್ದು, ಮಕ್ಕಳಿಗೆ ಆತ್ಮೀಯವಾಗಿ ಸ್ವಾಗತ ಕೋರಿ, ಶಾಲೆಯ ನೂತನ ಶೈಕ್ಷಣಿಕ ವರ್ಷದ ಆರಂಭಕ್ಕೆ ಶುಭಾಶಯಗಳನ್ನು ಕೋರಿದರು.





ಕಾರ್ಯಕ್ರಮದ ಸಂದರ್ಭದಲ್ಲಿ ಶಿಕ್ಷಕ ವರ್ಗದವರು ಮಕ್ಕಳಿಗೆ ಮತ್ತು ಪಾಲಕರಿಗೆ ಶಾಲೆಯ ಕಾರ್ಯವಿಧಾನ, ಈ ಶೈಕ್ಷಣಿಕ ವರ್ಷದ ಹೊಸ ನಿಯಮಗಳು ಹಾಗೂ ನಡೆಯಲಿರುವ ಶೈಕ್ಷಣಿಕ ಮತ್ತು ಸಹಪಠ್ಯ ಚಟುವಟಿಕೆಗಳ ಕುರಿತು ವಿವರವಾಗಿ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಗುರು ಮೊಹಮ್ಮದ್ ಬಾಬರ್ ಸಂತ ರಾಶಿ, ಶಿಕ್ಷಕರಾದ ಹಾಫಿಜ್ ಇಕ್ರಮುದ್ದೀನ್, ಮೊಹಮ್ಮದ್ ಖಲೀಲ್, ಅನ್ವರ್ ಬಾನು, ರೂಬಿನ, ಶೀಲಾ, ಕುಮಾರಿ ಯಶೋಧ, ಕುಮಾರಿ ಹರಿಷಿಯ, ಕುಮಾರಿ ಹಲೀಮಾ ಹಾಗೂ ಇತರೆ ಶಿಕ್ಷಕ ವೃಂದದವರು ಉಪಸ್ಥಿತರಿದ್ದರು.

# ಗ್ರಾಪಂ 15ನೇ ಹಣಕಾಸು ಯೋಜನೆಯ ಅನುದಾನ ದುರ್ಬಳಕೆ ಕ್ರಮಕ್ಕೆ ಮನವಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.3–**ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ದಲಿತ ಸಂಘರ್ಷ ಸಮಿತಿ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಜಿಲ್ಲಾ ಪಂಚಾ ಯಿತಿ ಕಾರ್ಯನಿರ್ವಹಕ ಅಧಿಕಾರಿಗಳಿಗೆ ಉಪತಹಸೀಲ್ದಾರ್ ವಿನಾಯಕ ರಾವ್ ಮೂಲಕ ಮನವಿ

ರಾಜ್ಯಾಧ್ಯಕ್ಷ ಹೆಚ್.ಹನುಮಂತ ಸೀಕಲ್ ಮಾತನಾಡಿ, ತಾಲೂಕು ಪಂಚಾಯಿತಿಯ ವಾಣಿಜ್ಯ ಮಳಿಗೆಗಳಿಗೆ ಕೂಡಲೆ ಟೆಂಡರ್ ಕರೆಯಬೇಕು, ತಾ.ಪಂ. ಹಳೆ ಕಟ್ಟಡವನ್ನು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಇತರ ಇಲಾಖೆಗಳಿಗೆ ನೀಡಬೇಕು,ಕೆ.ಆರ್.ಡಿ.ಇ.ಎಲ್ ಮ



ತ್ತು ಕ್ಯಾಸೋಟಿಕ್ ಇಲಾಖೆಯಿಂದ ನಿರ್ಮಾಣ ಮಾಡಲಾದ ಶಾಲಾ ಕಟ್ಟಡ ಕಾಮಗಾರಿ ಅತ್ಯಂತ ಕಳೆಪೆಯಾಗಿರುವುದರಿಂದ ತನಿಖೆ ನಡೆಸಬೇಕು, ತಾಲೂಕಿನ ಸುಂಕೇಶ್ವರ ಹಾಗೂ ಅರೋಲಿ ಗ್ರಾಮ, ಪಂಚಾಯಿತಿ ವತಿಯಿಂದ 15ನೇ ಹಣಕಾಸು ಯೋಜನೆಯ ಅನುದಾನವನ್ನು ದುರ್ಬಳಕೆ ಮಾಡಕೊಂಡಿರುವುದರಿಂದ ಕಾಮಗಾರಿಗಳ ಬಗ್ಗೆ ತನಿಖೆ ನಡೆಸಿ ಪಿ.ಡಿ.ಓ ಹಾಗೂ ತಾ.ಪಂ. ಇ.ಓ. ರವರ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ದಲಿತಪರ ಸಂಘಟನೆಗಳ ಹೋರಾಟಗಾರರಾದ ಹನುಮಂತ ಉದ್ಬಳ್,ನರಸಪ್ಪ ಜೂಕೂರು,ಮಲ್ಲೇಶಪ್ಪ ಅಮರೇಶ್ವರ ಕ್ಯಾಂಪ್,ಬಂಡೆಗುರು,ಹನುಮಂತ ಬೈಲ್ ಮಾರ್ಚೆಡ್, ಮೌನೇಶ ನಕ್ಕುಂದಿ, ಸೇರಿದಂತೆ ಇನ್ನಿತರರು ಇದ್ದರು.

## ಮೊದಲನೇಯ ಪುಟದಿಂದ

# ‘ಜಿಲ್ಲಾಸ್ಪತ್ರೆಗಾಗಿ ಲಿಂಗಸುಗೂರು ಸಂಪೂರ್ಣ ಬಂದ್’

ಕರಡಲ್, ನ್ಯಾಯವಾದಿಗಳಾದ ಸಿ.ಸಿ ಕರಡಕಲ್, ಕುಪ್ಪಣ ಮಾಣ ಕ್, ಎಂ.ಗಂಗಾಧರ, ಪುರಸಭೆ ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ದೊಡ್ಡನಗೌಡ ಹೊಸಮನಿ, ಸದಸ್ಯ ಪ್ರಮೋದ ಕುಲಕರ್ಣ ೯, ವೀರನಗೌಡ ಲೆಕ್ಕಿಹಾಳ, ಅಯ್ಯಪ್ಪ ಮಾಳೂರು, ಡಾ.ಸುಭಾಸ್ ಪಲ್ಲೇದ, ಲಿಂಗಪ್ಪ ಪರಂಗಿ, ಜಿಲಾನಿ ಪಾಶ, ತಿಮ್ಮಾರೆಡ್ಡಿ, ಮುನ್ನೂರು, ಡಿ.ಬಿ ಸೋಮನಮರಡಿ, ಪ್ರಭುಲಿಂಗ ಮೇಗಳಮನಿ, ಶಿವಪುತ್ರಗೌಡ ನಂದಿಹಾಳ, ಕವಿ ಪ್ರಶಾಂತ ದಾನಪ್ಪ, ಲಾಲಪ್ಪ ನಾಯ್ಕ, ಇಮ್ತಿಯಾಜ್ ಪಾಶ, ಗದ್ದೆನಗೌಡ, ಅಮರೇಶಪ್ಪ ಹುನೂರು, ಎಂ.ಸಿ ಚಂದ್ರಶೇಖರ, ಮಾದೇಶ ಸರ್ಜಾಪುರ, ಅಂಜನೇಯ ಭಂಡಾರಿ, ವೀರನಗೌಡ ಐದನಾಳ, ಐದನಾಳ, ಹನುಮಂತ ನಾಯಕ, ನಾಗರಾಜ ತಿಪ್ಪಣ್ಣ, ಅಮರೇಶ ಸ್ವಾಮಿ ಗಂಬೀರ ಮಠ, ವಿನಯ ಕುಮಾರ್ ಗಣಾಚಾರಿ, ಶಾಂತನಗೌಡ ದಿದ್ದಿಗಿ ಸೇರಿದಂತೆ ನಾನಾ ಸಂಘಟನೆಗಳ ಪ್ರಮುಖ ಬಂದ್ ಹೋರಾಟದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿದರು

# ಖಾಸಗಿ ಶಾಲೆಯ ಜಾಗ ಕಬಳಿಸಲು ಯತ್ನ: ಕ್ರಮಕ್ಕೆ ಡಿಕೆಶಿ ಸೂಚನೆ

ಮತ್ತಷ್ಟು ಅಸಹನೆ ವ್ಯಕ್ತಪಡಿಸಿದ ಡಿ.ಕೆ.ಶಿವಕುಮಾರ್, ಯಾರು, ಯಾವುದೇ ಪಕ್ಷದ ಹೆಸರು ಹೇಳಲಿ, ನನ್ನ ಹೆಸರು ಹೇಳಿದರೂ ಚಿಂತೆಯಿಲ್ಲ, ಶಾಲೆ ಮತ್ತು ವಿದ್ಯಾರ್ಥಿಗಳ ಭವಿಷ್ಯ ಮುಖ್ಯ ಖುದ್ದಾಗಿ ಈ ಪ್ರಕರಣವನ್ನು ಗಮನಿಸಬೇಕು. ಅತಿಕ್ರಮಣವನ್ನು ತೆರವು ಮಾಡಿ ಒಪ್ಪಂದದಂತೆ ಶಾಲೆ ನಡೆಯಲು ಅನುವು ಮಾಡಿಕೊಡಬೇಕು. ಬಿಇಒ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳದೇ ಇದ್ದರೆ ಅಮಾನತು ಮಾಡಬೇಕಾಗುತ್ತದೆ. ಎಂದು ಡಿ.ಕೆ.ಶಿವಕುಮಾರ್ ಎಚ್ಚರಿಸಿದರು. ರಿಯಲ್ ಎಸ್ಟೇಟ್ ವ್ಯವಹಾರ ಮಾಡಿಕೊಂಡು ಈ ರೀತಿ ಶಾಲೆಗಳಿಗೆ ತೊಂದರೆ ಕೊಡಲು ಸಾಧ್ಯವಿಲ್ಲ. ನಾನೂ ಕೂಡ ಶಾಲೆ ನಡೆಸುತ್ತಿದ್ದೇನೆ. ನಾನು ವಾರಸುದಾರನಾಗಿದ್ದರೂ ಕೂಡ ಶಾಲೆ ಸಮಾಜದ ಆಸ್ತಿ. ಶಿಕ್ಷಣ ಸಂಸ್ಥೆಗಳನ್ನು ರಕ್ಷಿಸದೇ ಇದ್ದರೆ ಮಕ್ಕಳ ಭವಿಷ್ಯದ ಮೇಲೆ ಪರಿಣಾಮ ಬೀರುತ್ತದೆ. ಯಾವುದೇ ಪಕ್ಷದವರಾಗಿರಲಿ, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ನಾವು ಮುಲಾಜಿಲ್ಲದೆ ಕ್ರಮ ಕೈಗೊಳ್ಳುತ್ತೇವೆ ಎಂದರು.

# ಸರ್ಕಾರಿ ನೌಕರರ ಎಲ್ಲ ಬೇಡಿಕೆ ಈಡೇರಿಸಲು ಕ್ರಮ: ಶಾಸಕ ಪ್ರಭು ಚವ್ಹಾಣ



**ಕಮಲನಗರ,ಜೂ.3–** ತಾಲ್ಲೂಕಿನ ಸರ್ಕಾರಿ ನೌಕರರ ಎಲ್ಲ ಬೇಡಿಕೆಗಳನ್ನು ಈಡೇರಿಸಲು ಪ್ರಮಾಣಿಕವಾಗಿ ಪ್ರಯತ್ನಿಸುವೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಕಮಲನಗರ ಪಟ್ಟಣದ ಸಂಗಮೇಶ್ವರ ಮಂಗಳ ಕಾರ್ಯಾಲಯದಲ್ಲಿ ಮೇ.30ರಂದು ಏರ್ಪಡಿಸಿದ್ದ ಸರ್ಕಾರಿ ನೌಕರರ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ, ಮಹಿಳಾ ದಿನಾಚರಣೆ ಮತ್ತು ನೌಕರರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನೌಕರರ ಸಂಘಕ್ಕೆ ಭವನ ನಿರ್ಮಿಸಿಕೊಡುವುದು, ಕ್ರೀಡಾಂಗಣ ನಿರ್ಮಾಣ ಮತ್ತು ತಾಲೂಕು ಕೇಂದ್ರಗಳಲ್ಲಿ ಇಲಾಖೆ ಕಚೇರಿಗಳ ಸ್ಥಾಪನೆಯಂತಹ ಹಲವು ಬೇಡಿಕೆಗಳನ್ನು ಸಲ್ಲಿಸಿದ್ದಾರೆ. ಸಂಘದ ಕೆಲಸ ಕಾರ್ಯಗಳಿಗೆ ಅನುಕೂಲವಾಗಲು ತಾತ್ಕಾಲಿಕವಾಗಿ ಸರ್ಕಾರಿ ಆಸ್ಪತ್ರೆ ಆವರಣದಲ್ಲಿ ಖಾಲಿಯಿರುವ ಒಂದು ಕೋಣೆಯ ವ್ಯವಸ್ಥೆ ಮಾಡಿಕೊಡುವಂತೆ ಸ್ಥಳದಲ್ಲಿದ್ದ ತಾಲ್ಲೂಕು ವೈದ್ಯಾಧಿಕಾರಿಗೆ ತಿಳಿಸಿದರು. ಅಲ್ಲದೇ ಸಂಘದ ಎಲ್ಲ ಬೇಡಿಕೆಗಳನ್ನು ಹಂತ ಹಂತವಾಗಿ ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಸರ್ಕಾರಿ ನೌಕರರು ಸರ್ಕಾರದ ಯೋಜನೆಗಳನ್ನು ಜನಸಾಮಾನ್ಯರಿಗರ ತಲುಪಿಸಲು ಪ್ರಮಾಣಿಕವಾಗಿ ಕೆಲಸ ಮಾಡಬೇಕು. ಜನರ ಸಮಸ್ಯೆಗಳಿಗೆ ಸರಿಯಾಗಿ ಸ್ಪಂದಿಸಬೇಕು. ತಾಲ್ಲೂಕಿನ ಅಭಿವೃದ್ಧಿಗೆ ನಿರಂತರ ಶ್ರಮಿಸುತ್ತಿದ್ದೇನೆ. ಸರ್ಕಾರಿ ನೌಕರರು ಸರಿಯಾಗಿ ಕೆಲಸ ಮಾಡುವ ಮೂಲಕ ಅಭಿವೃದ್ಧಿ ಕೆಲಸಗಳಿಗರ ಕೈಜೋಡಿಸಬೇಕು ಎಂದರು. ತಾಲ್ಲೂಕಿನ ಶಿಕ್ಷಕರ ಪ್ರಸಕ್ತ ಸಾಲಿನ ಸಾಧನೆ ತೀವ್ರ ಕಳಪೆಯಾಗಿದೆ. ವಿದ್ಯಾರ್ಥಿಗಳ ಫಲಿತಾಂಶ ವೃದ್ಧಿಯಾಗುವ ಬದಲು ಕುಸಿದಿದೆ. ಫಲಿತಾಂಶ ಸುಧಸರಣೆಗೆ ಪ್ರಮಾಣಿಕ ಪ್ರಯತ್ನಗಳು ನಡೆಯಬೇಕು ಎಂದು ಹೇಳಿದರು.

ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಸುನೀಲ ಕಸ್ತೂರೆ ಪ್ರಾಸ್ತಾವಿಕ ಮಾತನಾಡಿ ಕಮಲನಗರ ತಾಲ್ಲೂಕಿನ ನೌಕರರ ಸಮಸ್ಯೆಗಳು ಮತ್ತು ಆಗಬೇಕಾದ ಕೆಲಸಗಳ ಬಗ್ಗೆ ಶಾಸಕರ ಗಮನಕ್ಕೆ ತಂದರು. ಸಾಹಿತಿ ಪಾರ್ವತಿ ಸೋನಾರೆ ಮಾತನಾಡಿದರು.

# ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ಚುರುಕುಗೊಳಿಸಿ: ಶಿವಕುಮಾರ ಬೋಳಶೆಟ್ಟಿ




**ಬೀದರ,ಜೂ.3–** ಜೂನ್ 6 ರಂದು ಬಕ್ರಿದ್ ಹಬ್ಬ ಆಚರಣೆ ನಡೆಯಲಿದೆ. ಈ ಸಂದರ್ಭದಲ್ಲಿ ಆಕ್ರಮ ಗೋಹತ್ಯೆ ಹಾಗೂ ಗೋಸಾಗಾಟ ತಡೆಯಬೇಕೆಂದು ವಿಶ್ವ ಹಿಂದೂ ಪರಿಷತ್ತಿನ ಪ್ರಾಂತ ಕಾರ್ಯದರ್ಶಿ ಶಿವಕುಮಾರ ಬೋಳಶೆಟ್ಟಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಅಧಿಕಾರಿಗಳು ಈ ಕುರಿತು ಎಚ್ಚರಿಕೆಯಿಂದ ಗೋಹತ್ಯೆ ನಿಷೇಧ ಕಾಯಿದೆ–2020ರ ಪ್ರಕಾರ ತಡೆಹಿಡಿಯಬೇಕು. ಇಲ್ಲದಿದ್ದರೆ ಆ ಕೆಲಸ ನಾವು ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಜಿಲ್ಲಾ ಪೊಲೀಸ್ ಅಧೀಕ್ಷಕರು, ಜಿಲ್ಲಾಧಿಕಾರಿಗಳು, ಆರ್‌ಟಿಓ ಮತ್ತು ಇನ್ನಿತರ ಸಂಬಂಧಪಟ್ಟ ಅಧಿಕಾರಿಗಳು ಬೀದರ ಗಡಿಯಲ್ಲಿ ಆಕ್ರಮ ಗೋ ಸಾಗಾಟ ಕಂಡುಬಂದರೆ ಅವರನ್ನು ಬಂಧಿಸಿ, ವಾಹನಗಳನ್ನು ಜಪ್ತಿ ಮಾಡಿ, ಕಾನೂನಿನ ಅಡಿಯಲ್ಲಿ ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿದರು.

ರಾಜ್ಯದಲ್ಲಿ ಗೋಹತ್ಯೆ ನಿಷೇಧ ಜಾರಿಯಲ್ಲಿದೆ. ಅದನ್ನು ಪಾಲಿಸಿದರೆ ಗೋಹತ್ಯೆ ತಡೆಯಬಹುದು. ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ಚುರುಕುಗೊಳಿಸಬೇಕೆಂದು ಆಗ್ರಹಿಸಿದರು. ಕೆಲವು ಸೀಮಿತ ಪ್ರದೇಶಗಳಲ್ಲಿ ಗೋಹತ್ಯೆ ಹೆಚ್ಚಾಗಿ ನಡೆಸಲಾಗುತ್ತಿದೆ. ಅಂತಹ ಪ್ರದೇಶಗಳ ಮೇಲೆ ಪೊಲೀಸರು ಹದ್ದಿನ ಕಣ್ಣಿಡಬೇಕು. ಗೋಹತ್ಯೆ ನಿಷೇಧ ಹಾಗೂ ಸಂರಕ್ಷಣಾ ಕಾಯಿದೆ ಅನ್ವಯ ಕ್ರಮಕ್ಕೆ ಮುಂದಾಗುವಂತೆ ಸೂಚನೆ ನೀಡಬೇಕು. ಅಗತ್ಯ ಕ್ರಮದ ಕುರಿತು ಚರ್ಚಿಸಲು ಪೊಲೀಸ್, ಪ್ರಾದೇಶಿಕ ಸಾರಿಗೆ, ಪಶು ಸಂಗೋಪನೆ ಇಲಾಖೆ ಸೇರಿದಂತೆ ವಿವಿದ ಇಲಾಖೆ ಅಧಿಕಾರಿಗಳ ಸಭೆ ನಡೆಸಿ ನಿಯಮದ ಪ್ರಕಾರ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕು. ಒಂದು ವೇಳೆ ಸರ್ಕಾರದ ಕಾಯ್ದೆ, ಕಾನೂನು ಉಲ್ಲಂಘಿಸಿ ಇಂತಹ ಪ್ರಕರಣಗಳು ನಡೆಸುವುದು ಗಮನಕ್ಕೆ ಬಂದರೆ ನಮ್ಮ ಸಂಘಟನೆ ತೀವ್ರವಾದ ಹೋರಾಟ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ಶಿವಕುಮಾರ ಎಚ್ಚರಿಸಿದರು. ಇದೇ ವೇಳೆ ವಿಶ್ವ ಹಿಂದೂ ಪರಿಷತ್ತಿನ ಪ್ರಾಂತಿಯ ಕಾರ್ಯಕಾರಿಣಿ ಸದಸ್ಯರಾದ ರಾಮಕೃಷ್ಣನ್ ಸಾಳೆ, ವಿಭಾಗ ಕಾರ್ಯದರ್ಶಿ ಅಂಬರೇಶ್ ಸೂಲೆಗಾಂವೆ, ಪ್ರಾಂತ ವಿಶೇಷ ಸಂಪರ್ಕ ಸಹ ಪ್ರಮುಖರಾದ ಸತೀಶ ನೌಬಾದೆ, ಜಿಲ್ಲಾ ಉಪಾಧ್ಯಕ್ಷ ಸಂಗಮೇಶ ಗಾದಗಿ, ಭಜರಂಗ ದಳದ ಜಿಲ್ಲಾ ಸಂಯೋಜಕ ಭೀಮಣ್ಣ ಸೊರಳ್ಳಿ, ಜಿಲ್ಲಾ ಸಹ ಕಾರ್ಯದರ್ಶಿ ಬಸವರಾಜ ಯದಲಾಪುರೆ, ಬೀದರ ನಗರಾಧ್ಯಕ್ಷ ವೀರೇಂದ್ರ ಶಾಸ್ತ್ರಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ರೋಗ ಮುಕ್ತ ಜೀವನಕ್ಕಾಗಿ ಯೋಗ



**ಕಲಬುರಗಿ: ಜೂ.3:**ದೇಹ ಮತ್ತು ಮನಸ್ಸುಗಳನ್ನು ಒಂದುಗೂಡಿಸುವುದೇ ಯೋಗ ಮತ್ತು ಯೋಗದಿಂದ ರೋಗ ನಿರೋದಕ ಶಕ್ತಿ ಹೆಚ್ಚುತ್ತದೆ ಎಂದು ಪತಂಜಲಿ ಯೋಗ ಪೀಠದ ರಾಜ್ಯ ಪ್ರಾಭಾರಿ ಡಾ. ಭವರಲಾಲ್ ಆರ್ಯಜಿ ಹೇಳಿದರು.

ಅವರು ನಗರದ ಟಿ.ಎ.ಪಾಟೀಲ್ ಆಸ್ಪತ್ರೆ ಪಕ್ಕದಲ್ಲಿರುವ ಬಸವ ಮಂಟಪದಲ್ಲಿ ಪತಂಜಲಿ ಯೋಗ ಸಮಿತಿ ಮತ್ತು ಭಾರತ ಸ್ವಾಭಿಮಾನ ಟ್ರಸ್ಟ್ ವತಿಯಿಂದ ಸೋಮವಾರ ಬೆಳಗ್ಗೆ ವಿಶೇಷ ಯೋಗ ತರಬೇತಿ ಕಾಯರ್‍ಕ್ರಮದಲ್ಲಿ ಮಾತನಾಡಿ, ಯೋಗ ಎಲ್ಲ ರೀತಿಯ ಮಾನಸಿಕ ಒತ್ತಡಗಳನ್ನು ತಡೆದು ಮನಸ್ಸನ್ನು ಪ್ರಶಾಂತಗೊಳಿಸುತ್ತದೆ ಹಾಗೂ ರೋಗಮುಕ್ತ ಸಮಾಜ ನಿರ್ಮಿಸಲು ಸಹಕಾರಿಯಾಗಿದೆ ಆದ್ದರಿಂದ ಪ್ರತಿಯೊಬ್ಬರು ಬ್ರಹ್ಮಿ ಮೂಹರ್ತದಲ್ಲಿ ಯೋಗ ಮಾಡಿದರೆ ನಮ್ಮಲ್ಲಿ ಕಾಣಿಸಿಕೊಳ್ಳುವ ಅನೇಕ ರೋಗಗಳಿಗೆ ಪರಿಹಾರವನ್ನು ಯೋಗದಿಂದ ಪಡೆದುಕೊಳ್ಳಬಹುದು ಎಂದು ಹೇಳಿದರು.

ಪತಂಜಲಿ ಯೋಗ ಸಮಿತಿ ರಾಜ್ಯ ಕಾರಿಣಿ ಸದಸ್ಯ ಹಾಗೂ ಕಲಬುರಗಿ, ಬೀದರ್, ಯಾದಗಿರ ಉಸ್ತುವಾರಿ ಮತ್ತು ಭಾರತ ಸ್ವಾಭಿಮಾನ ಟ್ರಸ್ಟ್ ಜಿಲ್ಲಾಧ್ಯಕ್ಷ ಶಿವಾನಂದ ಮಾತನಾಡಿ, ಇಂದಿನ ಒತ್ತಡದ ಬದುಕಿನಲ್ಲಿ ರೋಗ ಬರದಂತೆ ನೋಡಿಕೊಳ್ಳುವ ಮತ್ತು ರೋಗವನ್ನು ತಡೆಗಟ್ಟುವ ಸಾಮರ್ಥ್ಯ ಯೋಗದಲ್ಲಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ರಾಜ್ಯ ಪ್ರಭಾರಿ ಭವರಲಾಲ್ ಆರ್ಯಜಿಯವರ ಜನ್ಮದಿನ ಆಚರಿಸಲಾಯಿತು. ಕಲಬುರಗಿ ಮತ್ತು ತಾಲೂಕು ಪದಾಧಿಕಾರಿಗಳು ಸನ್ಮಾನಿಸಿದರು. ಯೋಗ ಗುರು ಶಿವಾನಂದ ಸಾಲಿಮಠ ಅವರ ಪುತ್ರಿ ಡಾ, ಸ್ಫೂರ್ತಿ ಸಾಲಿಮಠ ಅವರನ್ನು ರಾಜ್ಯ ಪ್ರಭಾರಿಗಳು ಸನ್ಮಾನಿಸಿ 15000 ರೂಪಾಯಿ ಕಾಣಿಕೆ ನೀಡಿದರು. ನಂತರ ನಗರ ಮತ್ತು ತಾಲೂಕಿನ ಯೋಗ ಬಂದುಗಳು ಅವರನ್ನು ಸನ್ಮಾನಿಸಿದರು.

ನಂತರ ಯೋಗ ಶಿಕ್ಷಕರಿಗೆ ಹರಿದ್ವಾರದಿಂದ ಬಂದ ಜಾಕೀಗಳನ್ನು ಹಾಗೂ ಅಂತಾರಾಷ್ಟ್ರೀ ಯ ಯೋಗ ದಿನದ ಫೋಟೋ ಕಾಲ್ ಚಾಗಳನ್ನು ವಿತರಿಸಲಾಯಿತು.

ಲಕ್ಷ್ಮೀನಿವಾಸ ತಾಪಡಿಯಾ, ಡಾ. ಪಿ.ವಿ.ಕೊಠಾರಿ, ಚಂದ್ರಶೇಖರ ಗುರುಗುಂಟಿ, ಘನಶಾಮ ಗುತ್ತೇದಾರ, ಶರಣಗೌಡ ಪಾಟೀಲ್, ಪವನಕುಮಾರ ವಳಕೇರಿ, ಲೋಹಿತ ವಿಶ್ವಕ ರ್ಮ, ಹನುಮಾನಸಿಂಗ್ ಠಾಕೂರ, ಉಷಾ ಭಗತ್, ಈ ರಣ್ಣ ಯಾರಿ, ಮಾರೂತಿ ಘಡಾಳೆ, ಮಾರೂತಿ ಮಳಖೇಡ, ಶ್ರೀನಿವಾಸ ಪಾಟೀಲ್, ಅಂಬಣ್ಣ ಕುದರಿ, ಕೆ.ಆರ್.ಕುಲಕರ್ಣಿ, ಶರಣಬಸಪ್ಪ ಧಾಬಾ, ಸಂತೋಷ ಕುಡಳ್ಳಿ,ವಿಜಯಲಕ್ಷ್ಮೀ ಗಟಾಟೆ, ಲಲಿತಾ ಭೂತ್ಪೂರ, ಲಲಿತಾ ಜೀವಣಗಿ, ಶೀಲಾ ಕಾಮಶೆಟ್ಟಿ, ರೇಖಾ ಆಂದೋಲಾ, ರೇಖಾ ಮಠಪತಿ, ಜಯಶ್ರೀ ಸುಗಂಧಿ, ಡಾ, ಸಂಗಮೇಶ, ಖೇಮಸಿಂಗ್ ಪವಾರ, ಮಾನಂದ ಬೆಣ್ಣೆಸುರ, ರಾಜೇಂದ್ರ ಕಿಣಗಿ ಇತರರಿದ್ದರು. ಭಾರತ ಸ್ವಾಭಿಮಾನ ಪ್ರಧಾನ ಕಾರ್ಯದರ್ಶಿ ಮಂಜುಳಾ ತಡಿಬಿಡಿಮಠ ನಿರೂಪಿಸಿದರು.ಪತಂಜಲಿ ಯೋಗ ಸಮಿತಿ ಅಧ್ಯಕ್ಷ ಎಚ್.ಸುಭಾಶ್ಚಂದ್ರ ವಂದಿಸಿದರು.

# ಶರಣಬಸವೇಶ್ವರ ದೇವಾಲಯ ಮುಖ್ಯರಸ್ತೆ ಸೌಂದರ್ಯೀಕರಣಕ್ಕೆ ಆಗ್ರಹ



**ಕಲಬುರಗಿ,ಜೂ.3–** ಇಲ್ಲಿನ ಶ್ರೀ ಶರಣ ಬಸವೇಶ್ವರ ದೇವಾಲಯ ಎದುರಿನ ಮುಖ್ಯರಸ್ತೆ ಹಾಗೂ ಜಗತ್ ವೃತ್ತದಲ್ಲಿರುವ ಜಗಜ್ಯೋತಿ ಬಸವೇಶ್ವರ ಮೂರ್ತಿ ಆವರಣ ಸೌಂದರ್ಯೀಕರಣ ಕಾರ್ಯ ಕೈಗೊಳ್ಳುವಂತೆ ಒತ್ತಾಯಿಸಿ ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ವತಿಯಿಂದ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂಖಾನ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಮಹಾಸಭಾ ಕಲಬುರಗಿ ಜಿಲ್ಲಾಧ್ಯಕ್ಷ ಶರಣಕುಮಾರ್ ಮೋದಿ ನೇತೃತ್ವದಲ್ಲಿ ಮಹಾಸಭಾ ಪದಾಧಿಕಾರಿಗಳು ಹಾಗೂ ವೀರಶೈವ–ಲಿಂಗಾಯತ ಸಮುದಾಯದ ಮುಖಂಡರು ಈ ಕುರಿತು ಮನವಿ ಪತ್ರ ಸಲ್ಲಿಸಿ, ಕಲಬುರಗಿ ನಗರದ ಪುರದೇವತೆ ಮಹಾದಾಸೋಹಿ ಶ್ರೀ ಶರಣ ಬಸವೇಶ್ವರ ದೇವಾಲಯದ ಎದುರಿನ ಮುಖ್ಯರಸ್ತೆ ಅತ್ಯಂತ ಇಕ್ಕಟ್ಟಾಗಿರುವ ಕಾರಣಕ್ಕಾಗಿ ಭಕ್ತಾದಿಗಳ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಅದರಲ್ಲೂ ಮುಖ್ಯವಾಗಿ, ಯುಗಾದಿ ಬಳಿಕ ಒಂದು ತಿಂಗಳು ನಡೆಯುವ ಶ್ರೀ ಶರಣ ಬಸವೇಶ್ವರರ ಜಾತ್ರಾ ಮಹೋತ್ಸವ ಹಾಗೂ ಶ್ರಾವಣ ಮಾಸದ ಆಚರಣೆ ಮತ್ತು ಕಾರ್ತಿಕ ಮಾಸದಲ್ಲಿ ಕಲಬುರಗಿ ನಗರ ಒಳಗೊಂಡಂತೆ ರಾಜ್ಯದ ಬೇರೆ ಬೇರೆ ಭಾಗಗಳಿಂದ ಲಕ್ಷಾಂತರ ಭಕ್ತರು ದೇವಾಲಯಕ್ಕೆ ಆಗಮಿಸುತ್ತಾರೆ. ಆ ವೇಳೆ, ದೇವಾಲಯದ ಎದುರಿನ ಮುಖ್ಯರಸ್ತೆ ಅತ್ಯಂತ ಇಕ್ಕಟ್ಟಾಗಿರುವ ಕಾರಣದಿಂದಾಗಿ ಭಕ್ತಾದಿಗಳು ಹೆಚ್ಚು ತ್ರಾಸು ಅನುಭವಿಸುವಂತಾಗಿದೆ ಎಂದು ಕೆಯುಡಿಎ ಅಧ್ಯಕ್ಷರಿಗೆ ಮನದಟ್ಟು ಮಾಡಿಸಿದರು.

ಇದರ ಜೊತೆಗೆ, ನಗರದ ಜಗತ್ ವೃತ್ತದಲ್ಲಿರುವ ಅಶ್ವಾರೂಢ ಜಗಜ್ಯೋತಿ ಬಸವೇಶ್ವರ ಮೂರ್ತಿ ಆವರಣದ ಸೌಂದರ್ಯೀಕರಣ ಕಾರ್ಯವನ್ನು ಸಹ ಕೈಗೆತ್ತಿಕೊಳ್ಳಬೇಕೆಂದು ಮಹಾಸಭಾ ವತಿಯಿಂದ ಮುಖಂಡರು ಆಗ್ರಹಿಸಿದರು.

ಸಮಾಜದ ಮುಖಂಡರಾದ ಸೋಮಶೇಖರ ಹಿರೇಮಠ, ಚಂದ್ರಶೇಖರ ಬೆಣ್ಣೂರು, ಶಿವಾನಂದ ಮಠಪತಿ, ಸಂಜೀವ ಎಂ.ಪಾಟೀಲ್, ಜಗನ್ನಾಥ ಆರ್.ಬಿಲಗುಂದಿ, ನೂರಂದಯ್ಯ ವಿ.ಮಠಪತಿ ಸಾಲಹಳ್ಳಿ, ಸೋಮಶೇಖರ ಎಚ್.ಮಾಲಿಪಾಟೀಲ್ ತೇಗಲತಿಪ್ಪಿ, ಉಲ್ಲಾಸ ಎಸ್.ಪೊಲೀಸ್ ಪಾಟೀಲ್, ಭೀಮಾಶಂಕರ ಮಿಟೇಕರ್, ಶಾಂತಲಿಂಗ ಸೂಗೂರ, ಡಾ.ಸುಧಾ ಹಾಲಕಾಯಿ, ಡಾ.ನಾಗವೇಣಿ ಪಾಟೀಲ್, ರಾಜುಗೌಡ ಎನ್., ಉದಯಕುಮಾರ ಜೇವರ್ಗಿ, ಶರಣಬಸಪ್ಪ ಕೆ.ಗೋಧಿ, ಸಂತೋಷ ಪಾಟೀಲ್ ಡೊಣ್ಣೂರು, ಈರಣ್ಣ ಝಳಕಿ, ಅಶೋಕ ಇಂಡಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಗೌರವ ಡಾಕ್ಟರೇಟ್ ಪದವಿ ನಿರಾಕರಿಸಿದ ಸಚಿವ ಸತೀಶ್ ಜಾರಕಿಹೊಳಿ



**ಬೆಂಗಳೂರು,ಜೂ.3–** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ನೀಡಿದ ಗೌರವ ಡಾಕ್ಟರೇಟ್ ಡಿ.ಲಿಟ್ ಗೌರವ ಪದವಿಯನ್ನು ಸ್ವೀಕರಿಸಲು ಲೋಕೋಪ ಯೋಗಿ ಸಚಿವ ಸತೀಶ್ ಜಾರಕಿಹೊಳಿ ನಿರಾಕರಿಸಿದ್ದಾರೆ.

ಈ ಸಂಬಂಧ ವಿಶ್ವವಿದ್ಯಾಲಯದ ಕುಲಪತಿಗ ‘ಳಿಗೆ ಪತ್ರ ಬರೆದಿರುವ ಅವರು, ವಿವಿ ವತಿಯಿಂದ ನನಗೆ ನೀಡಿದಂತಹ ಗೌರವ ಡಾಕ್ಟರೇಟ್ ಪದವಿಯನ್ನು ಹಿಂಪಡೆಯಲು ಕೋರುತ್ತೇನೆ. ನನ್ನ ಈ ನಿರ್ಧಾರವನ್ನು ಅನ್ಯತ ಭಾವಿಸದೆ ನಾನು ಮನಸೋಇಚ್ಛೆ ಕೈಗೊಂಡ ನಿರ್ಧಾರವಾಗಿದ್ದು, ಈ ತೀರ್ಮಾನವನ್ನು ಸ್ವಾಗತಿಸುತ್ತಿ?ರೆಂದು ಭಾವಿಸುವುದಾಗಿ ಹೇಳಿದ್ದಾರೆ. ಗೌರವ ಡಾಕ್ಟರೇಟ್ ಪದವಿಯನ್ನು ನನಗೆ ಪ್ರದಾನಿಸುವ ಮೂಲಕ ತಾವು ಸಮಾಜದಲ್ಲಿ ನನ್ನ ಜವಾಬ್ದಾ ರಿಯನ್ನು ಹೆಚ್ಚಿಸಿರುತ್ತಿರಿ. ಸಾಮಾ ಜಿಕ ಸೇವೆಯಲ್ಲಿ ನಾನು ಕೈಗೊಂಡಿ ರುವ ಕಾರ್ಯಕ್ರಮಗ ಳನ್ನು ಸಫಲಗೊಳಿಸುವ ನಿಟ್ಟಿನಲ್ಲಿ ಹಲವು ಯೋಜನೆಗಳನ್ನು ರೂಪಿಸಿಕೊಂಡಿ ದ್ದೇನೆ.

ಅದನ್ನು ಕಾರ್ಯರೂಪಕ್ಕೆ ತರುವಂತಹ ಗುರುತರವಾದ ಹೊಣೆಗಾರಿಕೆ ನನ್ನ ಮೇಲಿದೆ. ಇದಕ್ಕೆ ಇನ್ನೂ ಹೆಚ್ಚಿನ ಕಾಲಾವಕಾಶ ಅವಶ್ಯಕತೆ ಇರುತ್ತದೆ ಎಂದಿದ್ದಾರೆ. ರಾಜ್ಯ ಮುಕ್ತ ವಿವಿ ಕುಲಾಧಿಪತಿ, ಸಮಕುಲಾಧಿಪತಿ, ಕುಲಪತಿ ಮತ್ತು ವ್ಯವಸ್ಥಾಪನ ಮಂಡಳಿ ಸದಸ್ಯರ ವತಿಯಿಂದ ಮಾ.27ರಂದು ವಿವಿಯ ಗೌರವ ಡಾಕ್ಟರೇಟ್ ಡಿ.ಲಿಟ್ ಗೌರವ ಪದವಿಯನ್ನು ನೀಡುವುದರ ಮೂಲಕ ಸನಾನಿಸಿದ ವ್ಯವಸ್ಥಾಪನ ಮಂಡಳಿಗೆ ನಾನು ಹುತ್ಪೂರ್ತಕ ಅಬಾರಿಯಾಗಿದ್ದೇನೆ ಎಂದು ಅವರು ಹೇಳಿದ್ದಾರೆ.

ಯುವ ಮಾರ್ಗ



# ನಟ ಕಮಲ್ ಹಾಸನ್‌ಗೆ ಹೈಕೋರ್ಟ್‌ನಿಂದ ಛೀಮಾರಿ

**ಬೆಂಗಳೂರು, ಜೂ.3–**ಕನ್ನಡಿಗರ ಭಾವನೆಗಳಿಗೆ ಧಕ್ಕೆ ತಂದಿರುವ ನೀವು ಮೊದಲು ಕ್ಷಮೆ ಕೇಳಬೇಕು. ಭಾಷೆ ಹುಟ್ಟಿದ್ದರೆ ಬಗ್ಗೆ ಮಾತನಾಡುವುದಕ್ಕೆ ಭಾಷಾ ನೀವು ತಜ್ಞರೇ? ಅಥವಾ ಇತಿಹಾಸಕಾರರೇ? ಕ್ಷಮೆಯಾಚಿಸದಿದ್ದರೆ ಕರ್ನಾಟಕದಲ್ಲಿ ಚಿತ್ರ ಪ್ರದರ್ಶನಗೊಳ್ಳಬೇ ಕೆಂದು ಏಕೆ ಬಯಸುತ್ತೀರಿ? ಮಾಡಿರುವ ತಪ್ಪಿಗೆ ಪೊಲೀಸರ ರಕ್ಷಣೆ ಬೇರೆ ಬೇಕಾ..?

ದಕ್ಷಿಣ ಭಾರತದ ಖ್ಯಾತ ನಟ ಕಮಲಹಾಸನ್ ಅವರು ತಮ್ಮ ಬಹುನಿರೀಕ್ಷಿತ ಥಗ್ ಲೈಫ್ ಚಿತ್ರ ಬಿಡುಗಡೆಗೆ ರಕ್ಷಣೆ ಕೋರಿ ಹೈಕೋರ್ಟ್‌ನಲ್ಲಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ವೇಳೆ ನ್ಯಾಯಾಲಯ ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಂಡ ಪರಿ ಇದು.ಹೈಕೋರ್ಟ್ ಏಕಸದಸ್ಯ ಪೀಠದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರು ಅರ್ಜಿ ವಿಚಾರಣೆ ವೇಳೆ ಕಮಲ್ ಹಾಸನ್ ಅವರನ್ನು ಕಠಿಣ ಶಬ್ದಗಳಲ್ಲಿ ತರಾಟೆಗೆ ತೆಗೆದುಕೊಂಡು ತಮಿಳು ಭಾಷೆಯಿಂದ ಕನ್ನಡ ಹುಟ್ಟಿತು ಎಂದು ಹೇಳಲು ನೀವೇನು ಭಾಷಾ ತಜ್ಞರೇ? ಅಥವಾ ಇತಿಹಾಸಗಾರರೇ? ಜನರ ಭಾವನೆಗಳಿಗೆ ಧಕ್ಕೆ ತಂದ ಮೇಲೆ ಕ್ಷಮೆಯಾಚಿಸಬೇಕಲ್ಲವೇ? ಎಂದು ಪ್ರಶ್ನೆ ಮಾಡಿದರು.

ಒಂದೇ ಒಂದೂ ಕ್ಷಮೆ ಕೇಳಲು ಇಷ್ಟೊಂದು ಹಾವಭಾವ ಏಕೆ) ಹಿಂದೆ ರಾಜಗೋಪಾಲಚಾರಿ ತಮ್ಮ ಹೇಳಿಕೆಗೆ ಕ್ಷಮೆ ಕೇಳಿರುವುದು ಗೊತ್ತಿಲ್ಲವೇ? ನಾನು ಇತಿಹಾಸವನ್ನು ನೋಡದೇ ಹೇಳಿಕೆ ನೀಡಿದ್ದೇನೆಂಬ ಕಡೆಪಕ್ಷ ವಿಷಾದದ ಭಾವನೆಯೂ ನಿಮ್ಮಲ್ಲಿ ಇಲ್ಲ, ಈಗ ನೀವು ವಾಣಿಜ್ಯದ ಹಿತಾಸಕ್ತಿಗಾಗಿ ರಕ್ಷಣೆ ಕೋರಿ ಅರ್ಜಿ ಸಲ್ಲಿಸಿದ್ದೀರಿ. ನೀರು, ಭೂಮಿ ಮತ್ತು ಭಾಷೆ ನಾಗರಿಕರಿಗೆ ಮುಖ್ಯವಾದವು. ಇದನ್ನು ಎಲ್ಲರೂ ಗೌರವಿಸಬೇಕೆಂದು ಸಲಹೆ ಮಾಡಿದರು.

ಕ್ಷಮೆ ಯಾಚಿಸುವುದಿಲ್ಲ ಎಂದರೆ ಭಾಷೆ ಬಗ್ಗೆ ಮಾತನಾಡಲು ನಿಮಗೆ ಅಧಿಕಾರ ಕೊಟ್ಟವರು ಯಾರು? ಯಾವುದೇ ಒಂದು ಭಾಷೆಯು ಇನ್ನೊಂದು ಭಾಷೆಯಿಂದ ಹುಟ್ಟಲು ಸಾಧ್ಯವಿಲ್ಲ. ಇದನ್ನು ದೃಢೀಕರಿಸಲು ನಿಮ್ಮ ಬಳಿ ಸಾಕ್ಷ್ಯಾಧಾರಗಳಿವೆಯೇ? ಭಾಷಾವಾರು ವಿಂಗಡಣೆ ಆಧಾರದ ಮೇಲೆ ರಾಜ್ಯಗಳು ಉದಯವಾಗಿದ್ದು. ಇದು ನಿಮ್ಮ ನಟನಿಗೆ ಗೊತ್ತಿಲ್ಲವೇ? ಎಂದು ಕಮಲಹಾಸನ್ ಪರ ವಕೀಲ ಧ್ಯಾನ್ ಚಿನ್ನಪ್ಪ ಅವರ ಮೇಲೆಯೂ ನ್ಯಾಯಮೂರ್ತಿಗಳು ಹರಿಹಾಯ್ದರು.ಈ ಹಿಂದೆ ಸಿ.ರಾಜುಗೋಪಾಲಚಾರಿ ಇದೇ ರೀತಿಯ ಹೇಳಿಕೆ ನೀಡಿದ್ದರು. ತಮ್ಮ ತಪ್ಪಿನ ಅರಿವಾದ ನಂತರ ಕ್ಷಮೆಯಾಚಿಸಿದ್ದರು. ಕನ್ನಡಿಗರ ಭಾವನೆಗಳಿಗೆ ಧಕ್ಕೆ ತಂದಿರುವ ಕಮಲ್ ಹಾಸನ್ ಕ್ಷಮೆಯಾಚನೆ ಮಾಡಿಲ್ಲ. ಬದಲಿಗೆ ನಾನು ಹೇಳಿದ್ದೇ ಸರಿ ಎಂದು ಮೊಂಡುವಾದ ಮಾಡುತ್ತಿದ್ದಾರೆ. 300 ಕೋಟಿ ರೂ. ವಾಣಿಜ್ಯ ಉದ್ದೇಶದ ಸಿನಿಮಾ ಮಾಡಿದ್ದೀರಿ. ನಿಮ್ಮ ತಪ್ಪಿಗೆ ಪೊಲೀಸರು ಚಿತ್ರ ಪ್ರದರ್ಶನಕ್ಕೆ ಭದ್ರತೆ ನೀಡಬೇಕೆಯೇ ಎಂದು ಛಾಟಿ ಬೀಸಿದರು.

ನಿಮ್ಮ ಹೇಳಿಕೆಯಿಂದ ಕನ್ನಡದ ಖ್ಯಾತ ಚಲನಚಿತ್ರ ನಟ ಶಿವರಾಜ್ ಕುಮಾರ್ ಸಮಸ್ಯೆ ಅನುಭವಿಸುವಂತಾಗಿದೆ. ನಾನು ಕೂಡ ಥಗ್ ಲೈಫ್ ಸಿನಿಮಾ ನೋಡಬೇಕೆಂದಿದ್ದೆ. ಆದರೆ ಈ ವಿವಾದದಿಂದಾಗಿ ಸಿನಿಮಾ ನೋಡುವುದೇ ಬೇಡ ಎಂಬ ತೀರ್ಮಾನಕ್ಕೆ ಬಂದಿದ್ದೇನೆ ಎಂದು ಆಸಮಾಧಾನದಿಂದ ಹೇಳಿದರು. ನೀವು



ನಿಮ್ಮ ಹೇಳಿಕೆಯನ್ನು ನಿರಾಕರಿಸಿಲ್ಲ. ಒಪ್ಪಿಕೊಂಡಿದ್ದೀರಾ. ಆದರೆ ಕ್ಷಮೆಯಾಚನೆ ಮಾಡಲು ಸಿದ್ಧರಿಲ್ಲ, ಬೇರೆಯವರ ಭಾವನೆಗಳಿಗೆ ಧಕ್ಕೆ ತಂದು ಸಿನಿಮಾ ಮಾಡಲು ಬಯಸುತ್ತೀದ್ದೀರಾ? 300 ಕೋಟಿ ರೂ. ಸಿನಿಮಾ ಎನ್ನುತ್ತಿದ್ದೀರಾ.. ಕ್ಷಮೆ ಯಾಚನೆ ಮಾಡಿ ಎಂದು ಸೂಚಿಸಿದರು.

ಅರ್ಜಿ ವಿಚಾರಣೆ ಕುರಿತು ನಮಗೆ ಆದೇಶ ಹೊರಡಿಸಲು ಯಾವುದೇ ಸಮಸ್ಯೆ ಇಲ್ಲ. ಕ್ಷಮೆ ಕೇಳದಿದ್ದರೆ ಬಿಟ್ಟುಬಿಡಿ. ಆದರೆ ಕರ್ನಾಟಕದಲ್ಲಿ ಸಿನಿಮಾ ಬಿಡುಗಡೆ ಏಕೆ ಆಗಬೇಕು? ಹಿಂದೆ ಕಾಳನಿಂದ ಸಿನಿಮಾ ಬಂದಾಗಲೂ ಈ ರೀತಿಯ ಸಮಸ್ಯೆ ಎದುರಾಗಿತ್ತು. ತಕ್ಷಣವೇ ರಾಜುಗೋಪಾಲಚಾರಿ ಅವರು ಕ್ಷಮೆಯಾಚಿಸಿದ್ದರು. ಆಗ ಹೈಕೋರ್ಟ್ ಸಿನಿಮಾ ಬಿಡುಗಡೆಗೆ ಭದ್ರತೆ ನೀಡುವಂತೆ ಆದೇಶಿಸಿತ್ತು. ಬೇರೊಬ್ಬರ ಭಾವನೆಗಳಿಗೆ ಧಕ್ಕೆ ತರಲು ನಿಮಗೆ ಅಧಿಕಾರ ಕೊಟ್ಟವರು ಯಾರು? ಎಂದು ಸಿಡಿಮಿಡಿಗೊಂಡರು.

ನೆಲ, ಭಾಷೆ ಬಗ್ಗೆ ಭಾವನೆಗಳಿರುತ್ತವೆ. ಜನರ ಭಾವನೆಗಳಿಗೆ ಯಾರೂ ಧಕ್ಕೆ ಉಂಟು ಮಾಡಬಾರದು. ಜನರು ಕ್ಷಮೆ ಕೇಳುವಂತೆ ಒತ್ತಾಯಿಸುತ್ತಿದ್ದಾರೆ. ಒಂದು ಬಾರಿ ಕ್ಷಮೆ ಕೇಳುವುದರಿಂದ ಅನೇಕ ಸಮಸ್ಯೆಗಳು ಬಗೆಹರಿಯುತ್ತವೆ. ನಿಮಗೆ ಕ್ಷಮೆ ಕೇಳಲು ಸಮಸ್ಯೆಯಾದರೂ ಏನು ಎಂದು ನ್ಯಾಯಮೂರ್ತಿ ನಾಗಪ್ರಸನ್ನ ಪ್ರಶ್ನೆ ಮಾಡಿದರು. ನೀವು ಸಿನಿಮಾ ನಿರ್ಮಾಣಕ್ಕೆ 300 ಕೋಟಿ ಹಾಕಿದ್ದೀರೋ ಅಥವಾ 350 ಕೋಟಿ ಹಾಕಿದ್ದೀರೋ ಅದು ನಿಮಗೆ ಬಿಟ್ಟಿದ್ದು, ಜನರ ಭಾವನೆಗಳಿಗೆ ಧಕ್ಕೆ ತಂದು ಹಣ ಸಂಪಾದನೆ ಮಾಡಬೇಕೇ? ಎಲ್ಲವೂ ಸರಾಗವಾಗಿ ನಡೆಯಬೇಕೆಂದರೆ ಕ್ಷಮೆಯನ್ನು ಕೇಳಿ. ಅಭಿವ್ಯಕ್ತಿ ಸ್ವಾತಂತ್ರ್ಯ ದಿಂದ ಭಾವನೆಗಳಿಗೆ ಧಕ್ಕೆಯಾಗಬಾರದು. ಸಿನಿಮಾ ನೋಡುವುದು ಎಲ್ಲರ ಮೂಲಭೂತ ಹಕ್ಕು.ನಿಮಗೆ ಭದ್ರತೆ ಬೇಕೆಂದರೆ ನಿಮ್ಮ ಹೇಳಿಕೆಗೆ ಕ್ಷಮೆ ಕೇಳಿ. ನೀವು ಇತಿಹಾಸದ ಬಗ್ಗೆ ದಾಖಲೆ ಸಮೇತ ಹೇಳಿದ್ದರೆ ಅದು ಚರ್ಚೆಯಾಗುತ್ತಿತ್ತು. ಕ್ಷಮೆ ಕೇಳದ ಹೊರತು ನಿಮ್ಮ ಅರ್ಜಿ ವಿಚಾರಣೆ ನಡೆಸಲು ಸಾಧ್ಯವಿಲ್ಲ ಎಂದು ನ್ಯಾಯಮೂರ್ತಿಗಳು ಕಟ್ಟುನಿಟ್ಟಾಗಿ ಹೇಳಿದರು: ಈ ವೇಳೆ ಕಮಲ್ ಹಾಸನ್ ಪರ ವಕೀಲ ಧ್ಯಾನ್ ಚಿನ್ನಪ್ಪ ಅವರು, ವಿವಾದವನ್ನು ಅನಗತ್ಯವಾಗಿ ದೊಡ್ಡದೆಂಬಂತೆ ಬಿಂಬಿಸಿದ್ದಾರೆ ಎಂದು ನ್ಯಾಯಾಧೀಶರ ಗಮನಸೆಳೆಯಲು ಮುಂದಾದರು. ಆಗ ಅರ್ಜಿದಾರರ ಪರ ವಕೀಲರು ಕಮಲ್ ಹಾಸನ್ ಹೇಳಿಕೆ ನೀಡಿರುವುದರ ಕುರಿತು ಆಡಿಯೋ, ವಿಡಿಯೋವನ್ನು ವೀಕ್ಷಣೆ ಮಾಡಬೇಕೆಂದು ನ್ಯಾಯಾಧೀಶರಿಗೆ ಮನವಿ ಮಾಡಿದರು. ಈ ವೇಳೆ ನಾಗಪ್ರಸನ್ನ ಅವರು ಕಮಲ್ ಹಾಸನ್ ಹೇಳಿದ್ದಾರೆ ಎನ್ನಲಾದ ವಿಡಿಯೋವನ್ನು ವೀಕ್ಷಿಸಿ, ಇದು ಜನರ ಭಾವನೆಗಳಿಗೆ ಧಕ್ಕೆ ತಂದಿಲ್ಲವೇ? ಎಂದು ಚಿನ್ನಪ್ಪ ಅವರನ್ನು ಪ್ರಶ್ನಿಸಿದರು.

**ಏನಿದು ವಿವಾದ..?:** ಕಮಲ್ ಹಾಸನ್ ನಟನೆಯ ಬಹುನಿರೀಕ್ಷಿತ ಥಗ್ ಲೈಫ್ ಆಡಿಯೋ ಬಿಡುಗಡೆ ಸಮಾರಂಭ ಚೆನ್ನೈನಲ್ಲಿ ನಡೆಯಿತು. ಈ ವೇಳೆ ಕಮಲಹಾಸನ್, ಕನ್ನಡವು ತಮಿಳು ಭಾಷೆಯಿಂದ ಹುಟ್ಟಿತು ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದರು.ಈ ಹೇಳಿಕೆ ನಂತರ ಕಮಲ್ ವಿರುದ್ಧ ಕನ್ನಡಿಗರು, ಕನ್ನಡಪರ ಸಂಘಟನೆಗಳು ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಸೇರಿದಂತೆ ಮತ್ತಿತರರು ತೀವ್ರ ಆಕ್ಷೇಪ ವ್ಯಕ್ತಪಡಿಸಿ ಕ್ಷಮೆ ಕೇಳಬೇಕೆಂದು ಪಟ್ಟು ಹಿಡಿದಿದ್ದಾರೆ. ಆದರೆ ಮೊಂಡುತನ ಮಾಡುತ್ತಿರುವ ಕಮಲ್ ಹಾಸನ್ ನಾನು ಪ್ರೀತಿಯಿಂದ ಹೇಳಿದ್ದೆ, ತಪ್ಪು ಮಾಡಿಲ್ಲ ಎಂದ ಮೇಲೆ ಕ್ಷಮೆ ಏಕೆ ಕೇಳಬೇಕೆಂದು ವಿತಂಡವಾದ ಮಾಡುತ್ತಿದ್ದಾರೆ. ಇದೇ 5ರಂದು ಕಮಲ್ ಹಾಸನ್ ನಟನೆಯ ಥಗ್ ಲೈಫ್ ಸಿನಿಮಾ ಬಿಡುಗಡೆಗೆ ದೇಶ, ವಿದೇಶಗಳಲ್ಲಿ ಮುಹೂರ್ತ ನಿಗದಿಯಾಗಿದೆ. ಆದರೆ ಕನ್ನಡ ಭಾಷೆ ಮತ್ತು ಕನ್ನಡಿಗರ ಭಾವನೆಗೆ ಧಕ್ಕೆ ತಂದಿರುವ ಕಾರಣ ಕರ್ನಾಟಕದಲ್ಲಿ ಅವರ ಚಿತ್ರ ಪ್ರದರ್ಶನಕ್ಕೆ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ನಿಷೇಧ ಹೇರಿದೆ.

## ಪಾಕ್ ಜೈಲಿನಿಂದ 200ಕ್ಕೂ ಹೆಚ್ಚು ಕೈದಿಗಳು ಪರಾರಿ

**ಕರಾಚಿ,ಜೂನ್.3–**ಸ್ಥಳಾಂತರಿಸುವ ಸಮಯದಲ್ಲಿ ಉಂಟಾದ ಅವ್ಯವಸ್ಥೆಯಲ್ಲಿ ಸುಮಾರು 216 ಕೈದಿಗಳು ಪಾಕಿಸ್ತಾನದ ಕರಾಚಿ ಜೈಲಿನಿಂದ ಪರಾರಿಯಾಗಿದ್ದಾರೆ. ಕರಾಚಿಯ ಮಾಲಿರ್ ಜೈಲಿನಲ್ಲಿ ಕಳೆದ ರಾತ್ರಿ ನಡೆದ ಈ ಘಟನೆಯಲ್ಲಿ ಒಬ್ಬ ಕೈದಿ ಸಾವನ್ನಪ್ಪಿದರು ಮತ್ತು ಮೂವರು ರಕ್ಷಣಾ ಸಿಬ್ಬಂದಿ ಮತ್ತು ಒಬ್ಬ ಜೈಲು ಸಿಬ್ಬಂದಿ ಗಾಯಗೊಂಡಿದ್ದಾರೆ.

ಎಂದು ಜಿಯೋ ನ್ಯೂಸ್ ವರದಿ ಮಾಡಿದೆ. ಜೈಲು ಅಧಿಕಾರಿಗಳ ಪ್ರಕಾರ, 80 ಕ್ಕೂ ಹೆಚ್ಚು ಕೈದಿಗಳನ್ನು ಮರಳಿ ವಶಪಡಿಸಿಕೊಳ್ಳಲಾಗಿದೆ. ಕಳೆದ 24 ಗಂಟೆಗಳಲ್ಲಿ ಕರಾಚಿಯಲ್ಲಿ ಸರಣಿ ಭೂಕಂಪಗಳು ಸಂಭವಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭೂಕಂಪನ ಸಂಭವಿಸಿದ ಸಮಯದಲ್ಲಿ 600 ಕ್ಕೂ ಹೆಚ್ಚು ಕೈದಿಗಳನ್ನು ಅವರ ಬ್ಯಾರಕ್‌ಗಳಿಂದ ಹೊರಗೆ ಕರೆದೊಯ್ಯಲಾಗಿದೆ ಎಂದು ಜೈಲು ಸೂಪರಿಂಟೆಂಡೆಂಟ್ ಅರ್ಷದ್ ಶಾ ಹೇಳಿದ್ದಾರೆ.

ಇದರ ಅವಕಾಶ ಪಡೆದು,ಅವ್ಯವಸ್ಥೆಯ ನಡುವೆ, 216 ಮಂದಿ ಪರಾರಿಯಾಗುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಶಾ ಹೇಳಿದ್ದಾರೆ.135 ಕ್ಕೂ ಹೆಚ್ಚು ಕೈದಿಗಳು ತಲೆಮರೆಸಿಕೊಂಡಿದ್ದು ಶೋಧ ಕಾರ್ಯಗಳು ಮುಂದುವರೆದಿವೆ ಎಂದು ಅವರು ಹೇಳಿದರು. ಉಳಿದ ಪರಾರಿಯಾದವರನ್ನು ಪತ್ತೆ ಹಚ್ಚಲು ಕಾನೂನು ಜಾರಿ ಅಧಿಕಾರಿಗಳು ಜಂಟಿ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದಾರೆ. ಸಿಂದ್‌ನ ಗೃಹ ಸಚಿವ ಜಿಯಾ–



ಉಲ್–ಹಸನ್ ಲಾಂಜಾರ್ ಈ ಘಟನೆಯನ್ನು ಇತ್ತೀಚಿನ ವರ್ಷಗಳಲ್ಲಿ ಅತ್ಯಂತ ಗಂಭೀರ ಜೈಲ್ ಬ್ರೇಕ್ ಎಂದು ಕರೆದಿದ್ದಾರೆ.

## ಕ್ಷಮೆಯಾಚಿಸದೆ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಗೆ ಪತ್ರ ಬರೆದ ಕಮಲ್ ಹಾಸನ್

**ಬೆಂಗಳೂರು,ಜೂ.3–** ನನ್ನ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ. ನಾನು ಯಾರಿಗೂ ನೋವುಂಟು ಮಾಡುವ ಉದ್ದೇಶ ಇರಲಿಲ್ಲ. ಕನ್ನಡ ಭಾಷೆಯು ಶ್ರೀಮಂತ ಇತಿಹಾಸವನ್ನು ಹೊಂದಿದೆ ಎಂಬುದರ ಬಗ್ಗೆ ಯಾರಿಗೂ ಅನುಮಾನ ಬೇಡ ಕನ್ನಡ ಭಾಷೆಯು ತಮಿಳು ಭಾಷೆಯಿಂದ ಉದಯವಾಯಿತು ಎಂದು ವಿವಾದಾತ್ಮಕ ಹೇಳಿಕೆ ನೀಡಿ ಕನ್ನಡಿಗರು ಮತ್ತು ಕನ್ನಡಪರ ಸಂಘಟನೆಗಳ ಕೆಂಗಣ್ಣಿಗೆ ಗುರಿಯಾಗಿರುವ ಖ್ಯಾತ ನಟ ಕಮಲ್ ಹಾಸನ್ ಅವರು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರಿಗೆ ಬರೆದಿರುವ ಪತ್ರದ ಸಾರಾಂಶ ಇದು.

ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ನರಸಿಂಹಲು ಅವರಿಗೆ ಪತ್ರ ಬರೆದಿರುವ ಕಮಲ್ ಹಾಸನ್, ಕರ್ನಾಟಕದ ಇತಿಹಾಸ, ಕನ್ನಡ ಭಾಷೆ, ಇಲ್ಲಿನ ನೆಲ–ಜಲದ ಬಗ್ಗೆ ಅಪಾರವಾದ ಗೌರವವಿದೆ ಎಂದು ಹೇಳಿದ್ದಾರೆ. ಆದರೆ ಎಲ್ಲಿಯೂ ತಮ ಹೇಳಿಕೆ ಬಗ್ಗೆ ಕ್ಷಮೆಯಾಚಿಸದೆ ಮೊಂಡುತನವನ್ನೆ ಪ್ರದರ್ಶಿಸಿದ್ದಾರೆ. ಥಗ್ ಲೈಫ್ ಚಿತ್ರದ ಆಡಿಯೋ ಬಿಡುಗಡೆ ಸಮಾರಂಭದಲ್ಲಿ ದಂತಕಥೆ ಡಾ. ರಾಜ್‌ಕುಮಾರ್ ಹಾಗೂ ಶಿವರಾಜ್‌ಕುಮಾರ್ ಅವರ ಬಗ್ಗೆ ಪ್ರೀತಿಯಿಂದ ಹೇಳಲಾದ ನನ್ನ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ.

ನನ್ನ ಉದ್ದೇಶದ ವಿರುದ್ಧವಾಗಿ ಅದನ್ನು ಅರ್ಥ ಮಾಡಿಕೊಳ್ಳಲಾಗಿದೆ. ನಾವೆಲ್ಲರೂ ಒಂದೇ ಕುಟುಂಬದವರು ಎಂಬುದು ನನ್ನ ಉದ್ದೇಶವಾಗಿತ್ತು. ಕನ್ನಡ ಭಾಷೆಯ ಹಿರಿಮೆಯನ್ನು ಕುಗ್ಗಿಸುವುದು ನನ್ನ ಉದ್ದೇಶ ಆಗಿರಲಿಲ್ಲ. ಕನ್ನಡ ಭಾಷೆಯ ಶ್ರೀಮಂತ ಇತಿಹಾಸದ ಬಗ್ಗೆ ಯಾವುದೇ ಅನುಮಾನ ಇಲ್ಲ ಎಂದು ವಿವಾದವನ್ನು



ಸುಖಾಂತ್ಯಗೊಳಿಸುವ ಪ್ರಯತ್ನ ಮಾಡಿದ್ದಾರೆ.

ತಮಿಳಿನ ರೀತಿಯೇ ಕನ್ನಡ ಸಹ ಶ್ರೀಮಂತ ಸಂಸ್ಕೃತಿ, ಸಾಹಿತ್ಯ ಮತ್ತು ಪರಂಪರೆಯನ್ನು ಹೊಂದಿದ್ದು, ಅದನ್ನು ನಾನು ಗೌರವಿಸುತ್ತಾ ಬಂದಿದ್ದೇನೆ. ಕನ್ನಡ ಭಾಷಿಕರು, ನನ್ನ ವೃತ್ತಿ ಜೀವನದಲ್ಲಿ ನನಗೆ ತೋರಿದ ಪ್ರೀತಿ ಮತ್ತು ಗೌರವ ನನ್ನ ಎದೆಯಲ್ಲಿ ಭದ್ರವಾಗಿದೆ. ಭಾಷೆಯ ಬಗ್ಗೆ ನನಗಿರುವ ಪ್ರೀತಿ ಸ್ಫಟಿಕದಂಥಹದ್ದು, ಅದನ್ನು ನಾನು ಯಾವುದೇ ಭೀತಿ ಇಲ್ಲದೆ ಹೇಳುವೆ. ಅದರಂತೆ ಕನ್ನಡಿಗರಿಗೆ ಅವರ ಭಾಷೆಯ ಬಗ್ಗೆ ಇರುವ ಅದಮ್ಯ ಪ್ರೀತಿಯ ಬಗ್ಗೆಯೂ ನನಗೆ ಗೌರವ ಇದೆ ಎಂದಿದ್ದಾರೆ.

ತಮಿಳು, ಕನ್ನಡ, ತೆಲುಗು, ಮಲಯಾಳಂ ಮತ್ತು ಈ ನೆಲದ ಎಲ್ಲ ಭಾಷೆಗಳ ಜೊತೆಗೆ ನನಗೆ ಇರುವ ನಂಟು ಅಭೇದ್ಯವಾದುದು. ಭಾಷೆಗಳ ಸಮಾನ ಗೌರವಕ್ಕಾಗಿ ನಾನು ಸದಾ ಒತ್ತಾಯಿಸಿದ್ದೇನೆ ಹಾಗೂ ಯಾವುದೇ ಒಂದು ಭಾಷೆಯ ಹೇರಿಕೆಯನ್ನು ಹಾಗೂ ಒಂದು ಭಾಷೆ ಮತ್ತೊಂದು ಭಾಷೆಯ ಮೇಲೆ ಮಾಡುವ ದೌರ್ಜನ್ಯವನ್ನು ವಿರೋಧಿಸುತ್ತಲೇ ಬಂದಿದ್ದೇನೆ. ದೇಶದ ಭಾಷಾ ಸಾಮರಸ್ಯವನ್ನು ಹಾಳು ಮಾಡುವ ಯಾವುದೇ ಪ್ರಯತ್ನದ ವಿರುದ್ಧ ನಾನಿದ್ದೇನೆ ಎಂದು ಹೇಳಿದ್ದಾರೆ.

ನನಗೆ ಸಿನಿಮಾ ಭಾಷೆ ಗೊತ್ತು, ನಾನು ಅದನ್ನೇ ಮಾತನಾಡುತ್ತೇನೆ. ಸಿನಿಮಾ ಭಾಷೆ ವಿಶ್ವಭಾಷೆ. ಆ ಭಾಷೆಗೆ ಪ್ರೀತಿಸುವುದು ಮಾತ್ರವೇ ಗೊತ್ತು. ನನ್ನ ಹೇಳಿಕೆ ಸಹ ನಮ ನಡುವೆ ಇರುವ ಪ್ರೀತಿ ಮತ್ತು ಬಾಂಧವ್ಯ ಹಾಗೂ ಒಗ್ಗಟ್ಟನ್ನು ತೋರ್ಪಡಿಸುವ ಉದ್ದೇಶವನ್ನೆ ಹೊಂದಿತ್ತು. ನನ್ನ ಹಿರಿಯರು ನನಗೆ ಕಲಿಸಿಕೊಟ್ಟ ಪ್ರೀತಿ ಮತ್ತು ಗೌರವವನ್ನೇ ನಾನು ಪಾಲಿಸುತ್ತಿದ್ದೇನೆ.


ಅದೇ ಪ್ರೀತಿ ಮತ್ತು ಗೌರವದ ಭಾಗವಾಗಿ ಶಿವಣ್ಣ ಅವರು ಆಡಿಯೋ ಬಿಡುಗಡೆ ಕಾರ್ಯಕ್ರಮಕ್ಕೆ ಆಗಮಿಸಿದ್ದರು. ಆದರೆ ಆ ಕಾರಣಕ್ಕಾಗಿ ಅವರು ಮುಜುಗರ ಅನುಭವಿಸಬೇಕಾಗಿ ಬಂದಿರುವುದಕ್ಕೆ ನನಗೆ ವಿಷಾದವಿದೆ ಎಂದಿದ್ದಾರೆ.

ಸಿನಿಮಾ ಜನರ ನಡುವೆ ಸೇತುವೆಯಾಗಿ ಇರಬೇಕು, ಜನರ ಬೇರ್ಪಡಿಸುವ ಗೋಡೆ ಆಗಬಾರದು. ಇದು ನನ್ನ ಹೇಳಿಕೆಯ ಉದ್ದೇಶವಾಗಿತ್ತು ಮತ್ತು ನಾನು ಎಂದಿಗೂ ಸಾರ್ವಜನಿಕ ಅಶಾಂತಿ ಮತ್ತು ದ್ವೇಷಕ್ಕೆ ಅವಕಾಶ ನೀಡಿಲ್ಲ. ಎಂದಿಗೂ ನೀಡಲು ಬಯಸುವುದಿಲ್ಲ. ನನ್ನ ಮಾತುಗಳ ಉದ್ದೇಶವನ್ನು ಗ್ರಹಿಸಿ, ಕರ್ನಾಟಕದ ಬಗ್ಗೆ, ಅದರ ಜನರ ಬಗ್ಗೆ ಮತ್ತು ಅವರ ಭಾಷೆಯ ಬಗ್ಗೆ ನನಗಿರುವ ನಿರಂತರ ಪ್ರೀತಿಯನ್ನು ಗುರುತಿಸಲಾಗುವುದು ಎಂದು ನಾನು ಪ್ರಾಮಾಣಿಕವಾಗಿ ಭಾವಿಸುತ್ತೇನೆ. ಈ ತಪ್ಪು ತಿಳುವಳಿಕೆ ತಾತ್ಕಾಲಿಕ ಮತ್ತು ನಮ ಪರಸ್ಪರ ಪ್ರೀತಿ ಮತ್ತು ಗೌರವವನ್ನು ಮತ್ತೆ ಎತ್ತಿಹಿಡಿಯಲು ಒಂದು ಅವಕಾಶ ಎಂದು ನಾನು ಪ್ರಾಮಾಣಿಕವಾಗಿ ನಂಬುತ್ತೇನೆ ಅಂದು ಅವರು ಹೇಳಿದ್ದಾರೆ.

## ಬೆಂಗಳೂರಲ್ಲಿ ಹೈಡ್ರೋ ಗಾಂಜಾ ಜಪ್ತಿ, ಕೇರಳ ಮೂಲದ ಪದವೀಧರರ ಬಂಧನ

**ಬೆಂಗಳೂರು, ಜೂ.3–** ಸಿಸಿಬಿ ಪೊಲೀಸರು ಕಾರ್ಯಾಚರಣೆ ಕೈಗೊಂಡು ಕೇರಳ ಮೂಲದ ಇಬ್ಬರು ಪದವೀಧ ರರನ್ನು ಬಂಧಿಸಿ 13 ಲಕ್ಷ ರೂ. ಮೌಲ್ಯದ ಗಾಂಜಾ ಹಾಗೂ ಹೈಡ್ರೋ ಗಾಂಜಾ ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಸಂಪಿಗೆಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಅಪಾರ್ಟ್‌ಮೆಂಟ್‌ವೊಂದರಲ್ಲಿ ಇಬ್ಬರು ವ್ಯಕ್ತಿಗಳು ನಿಷೇಧಿತ ಮಾದಕ ವಸ್ತು ಗಾಂಜಾ ಮಾರಾಟ ಮಾಡುತ್ತಿದ್ದಾರೆಂಬ ಮಾಹಿತಿ ಸಿಸಿಬಿ ಪೊಲೀಸರಿಗೆ ಲಭಿಸಿದೆ. ತಕ್ಷಣ ಸಿಸಿಬಿ ಮಾದಕ ದ್ರವ್ಯ ನಿಗ್ರಹದಳದ ಅಧಿಕಾರಿ ಮತ್ತು ಸಿಬ್ಬಂದಿ ಖಚಿತ ಮಾಹಿತಿ ಮೇರೆಗೆ ಪ್ರಕರಣ ದಾಖಲಿಸಿಕೊಂಡು ಕಾರ್ಯಾಚರಣೆ ಕೈಗೊಂಡು ಸ್ಥಳದ ಮೇಲೆ ದಾಳಿ ಮಾಡಿ ಇಬ್ಬರು ಬಿಬಿಎ ಪದವೀಧರರನ್ನು ಬಂಧಿಸಿದ್ದಾರೆ.

ಈ ಇಬ್ಬರನ್ನು ವಿಚಾರಣೆಗೆ ಒಳಪಡಿಸಿ ದಾಗ, ಮೋಜಿನ ಜೀವನ ಮತ್ತು ಅಕ್ರಮ ಹಣ ಸಂಪಾದನೆ ಮಾಡುವ ಉದ್ದೇಶದಿಂ ದ ಕೇರಳದ ಅಪರಿಚಿತ ವ್ಯಕ್ತಿಗಳಿಂದ ಗಾಂಜಾ ಮತ್ತು ಹೈಡ್ರೊ ಗಾಂಜಾವನ್ನು ಕಡಿಮೆ ಬೆಲೆಗೆ ಖರೀದಿಸಿ ನಗರಕ್ಕೆ ತಂದು ಹೆಚ್ಚಿನ ಬೆಲೆಗೆ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದುದಾಗಿ ಹೇಳಿದ್ದಾರೆ. ಆರೋಪಿಗಳಿಂದ 1 ಕೆಜಿ 200 ಗ್ರಾಂ ಗಾಂಜಾ, 220 ಗ್ರಾಂ ಹೈಡ್ರೊ ಗಾಂಜಾ, 1 ತೂಕದ ಯಂತ್ರ,



2 ಐಫೋನ್ ಗಳನ್ನು ವಶಪಡಿಸಿಕೊಂಡಿದ್ದು ಇವುಗಳ ಒಟ್ಟು ಮೌಲ್ಯ 13 ಲಕ್ಷ ರೂ. ಗಳೆಂದು ಅಂದಾಜಿಸಲಾಗಿದೆ.ಇಬ್ಬರ ಬಂಧನ: ಕಾಲೇಜೊಂದರ ಬಳಿ ಮಾದಕ ವಸ್ತು ಮಾರಾಟ ಮಾಡುತ್ತಿದ್ದ ಇಬ್ಬರನ್ನು ಸಿಸಿಬಿ ಪೊಲೀಸರು ಬಂಧಿಸಿ1.38 ಲಕ್ಷ ರೂ. ಮೌಲ್ಯದ ಗಾಂಜಾ ಹಾಗೂ ಎಂಡಿಎಂಎ ಕ್ರಿಸ್ಟೆಲ್ ವಶಪಡಿಸಿಕೊಂಡಿದ್ದಾರೆ. ಬ್ಯಾಡರಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ವಿಶ್ವೇಶ್ವರಯ್ಯ ಲೇಔಟ್‌ನಲ್ಲಿರುವ ಈಸ್ಟ್–ವೆಸ್ಟ್ ಕಾಲೇಜು ಬಳಿ ಇಬ್ಬರು ವ್ಯಕ್ತಿಗಳು ಮಾದಕ ವಸ್ತು ಮಾರಾಟ ಮಾಡುತ್ತಿದ್ದಾರೆಂಬ ಮಾಹಿತಿ ಸಿಸಿಬಿ ಪೊಲೀಸರಿಗೆ ಲಭಿಸಿದೆ.ಬ್ಯಾಡರಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡ ಸಿಸಿಬಿ ಪೊಲೀಸರು ಸ್ಥಳದ ಮೇಲೆ ದಾಳಿ ಮಾಡಿ ಇಬ್ಬರನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ.ನಗರದ ಇಬ್ಬರು ಆರೋಪಿಗಳು ಮಂಡ್ಯ ಜಿಲ್ಲೆ ಬೆಳ್ಳೂರು ಕ್ರಾಸ್ ಬಳಿ ಅಪರಿಚಿತರಿಂದ ಗಾಂಜಾ ಮತ್ತುಎಂಡಿಎಂಎ ಕ್ರಿಸ್ಟೆಲ್‌ಗಳನ್ನು ಕಡಿಮೆ ಬೆಲೆಗೆ ಖರೀದಿ ಮಾಡಿಕೊಂಡು ಬಂದು ನಗರದಲ್ಲಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ಅಕ್ರಮ ಹಣ ಸಂಪಾದನೆಯಲ್ಲಿ ತೊಡಗಿರುವುದು ಪೊಲೀಸರ ತನಿಖೆಯಿಂದ ತಿಳಿದು ಬಂದಿದೆ. ಆರೋಪಿಗಳಿಂದ 1ಕೆಜಿ 940 ಗಾಂಜಾ, 13.5 ಗ್ರಾಂ ಎಂಡಿಎಂಎ ಕ್ರಿಸ್ಟೆಲ್ ವಶಪಡಿಸಿಕೊಳ್ಳುವಲ್ಲಿ ಸಿಸಿಬಿ ಮಾದಕ ದ್ರವ್ಯ ನಿಗ್ರಹ ದಳದ ಅಧಿಕಾರಿ ಹಾಗೂ ಸಿಬ್ಬಂದಿ ಯಶಸ್ವಿಯಾಗಿದ್ದಾರೆ.

## 18 ವರ್ಷಗಳ ತಪಸ್ಸು ಅಂತ್ಯ, IPL ಗೆದ್ದು ಬೀಗಿದ ಆರ್‌ಸಿಬಿ

**ಬೆಂಗಳೂರು,ಜೂ.3–** 18 ವರ್ಷಗಳ ಬಳಿಕ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮೊದಲ ಬಾರಿಗೆ ಐಪಿಎಲ್ ಟ್ರೋಫಿ ಎತ್ತಿ ಹಿಡಿದಿದೆ. ಈ ಮೂಲಕ 18 ವರ್ಷಗಳ ತಪಸ್ಸಿಗೆ ಫಲ ಸಿಕ್ಕಂತಾಗಿದೆ. ಕೋಟಿ ಕೋಟಿ ಅಭಿಮಾನಿಗಳ ಹರಕೆ ಫಲಿಸಿದೆ.ಒಂದು ಬಾರಿಯಾದರೂ ಕಪ್ ಗೆಲ್ಲಬೇಕೆಂಬ 18 ವರ್ಷಗಳ ಕನಸು ಈ ಬಾರಿ ನನಸಾಗಿದೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಮೊದಲ ಬಾರಿಗೆ ಚಾಂಪಿಯನ್ ಪಟ್ಟ ಅಲಂಕರಿಸುವ ಮೂಲಕ ಈ ಸಲ ಕಪ್ ನಮ್ದೇ' ಎಂದು ಕನವರಿಸುತ್ತಿದ್ದ ಅಭಿಮಾನಿಗಳ ಕನಸು ಕೊನೆಗೂ ನನಸಾಗಿದೆ.

ಅಹ್ಮದಾಬಾದ್ ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಮಂಗಳವಾರ ನಡೆದ ರೋಮಾಂಚಕ ಪಂದ್ಯದಲ್ಲಿ ಗೆಲ್ಲಲು 192 ರನ್ ಗಳ ಸವಾಲಿನ ಗುರಿ ಪಡೆದ ಶ್ರೇಯಸ್ ಅಯ್ಯರ್ ಪಡೆ ನಿಗದಿತ ಓವರ್ ಗಳು ಮುಗಿದಾಗ 7 ವಿಕೆಟ್ ಕಳೆದುಕೊಂಡು 184 ರನ್ ಗಳನ್ನಷ್ಟೇ ಗಳಿಸಲು ಶಕ್ತವಾಯಿತು.

**ಸಂಕ್ಷಿಪ್ತ ಸ್ಕೋರ್**

ರಾಯಲ್ ಚಾಲೆಂಜರ್ಸ್ ಬೆಂಗಳೂರು 20 ಓವರ್ ಗಳಲ್ಲಿ 190/9, ಕೊಹ್ಲಿ 43, ರಜತ್ ಪಾಟೀದಾರ್ 26, ಲಿವಿಂಗ್ ಸ್ಟನ್ 25, ಮಾಯಾಂಕ್ ಅಗರ್ವಾಲ್ 24, ಜಿತೇಶ್ ಶರ್ಮಾ 24, ಅರ್ಶದೀಪ್ ಸಿಂಗ್ 40ಕ್ಕೆ 3, ಕೈಲ್ ಜಾಮಿಸನ್ 48ಕ್ಕೆ 3, ಪಂಜಾಬ್ ಕಿಂಗ್ಸ್ 20 ಓವರ್ ಗಳಲ್ಲಿ 184/7, ಶ್ ಇಂಗ್ಲಿಸ್ 39, ಪ್ರಭಾ ಸಿಮ್ರಾನ್ ಸಿಂಗ್ 26, ಪ್ರಿಯಾಂಶ್ ಆರ್ಯ 24, ಕೃನಾಲ್ ಪಾಂಡ್ಯ 17ಕ್ಕೆ 2



# ಆತ್ಕೂರಲ್ಲಿ ಮಾರಿಕಾಂಬಾ ದೇವಿ ರಥೋತ್ಸವ: ಶಾಸಕ ಬಸನಗೌಡ ದದ್ದಲ್ ಭಾಗಿ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.3**–ರಾಯಚೂರು ಗ್ರಾಮೀಣ ಕ್ಷೇತ್ರದ ಆತ್ಕೂರು ಗ್ರಾಮದಲ್ಲಿ ಅದ್ದೂರಿಯಾಗಿ ಜರುಗಿದ ಶ್ರೀಮಾರಿಕಾಂಬಾ ದೇವಿಯ ಜಾತ್ರೆಯ ರಥೋತ್ಸವದಲ್ಲಿ ಜನಪ್ರಿಯ ಶಾಸಕರು ಹಾಗೂ ಕರ್ನಾಟಕ ರಾಜ್ಯ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಸನಗೌಡ ದದ್ದಲ್ ಅವರು ಭಾಗವಹಿಸಿ ದೇವಿಯ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಮಾರಿಕಾಂಬಾ ದೇವಿಯ ಕೃಪೆ ಎಲ್ಲರ ಮೇಲೂ ಇರಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಊರಿನ ಹಿರಿಯ ಮುಖಂಡರುಗಳು, ಸುತ್ತಮುತ್ತಲಿನ ಗ್ರಾಮಗಳ ಮುಖಂಡರುಗಳು ಹಾಗೂ ಅಪಾರ ಸಂಖ್ಯೆಯ ಗ್ರಾಮಸ್ಥರು ಉಪಸ್ಥಿತರಿದ್ದರು. ಭಕ್ತರು ರಥೋತ್ಸವದಲ್ಲಿ ಪಾಲ್ಗೊಂಡು ದೇವಿಯ ದರ್ಶನ ಪಡೆದರು.

# ಯುಪಿಎಸ್‌ಸಿ, ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.3**–ಇಲ್ಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಯು.ಪಿ.ಎಸ್.ಸಿ. ನಾಗರಿಕ ಸೇವೆ ಮತ್ತು ಬ್ಯಾಂಕಿಂಗ್ ಪಿ.ಒ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 2025–26ನೇ ಸಾಲಿನಲ್ಲಿ ಉಚಿತ ಪರೀಕ್ಷಾ ಪೂರ್ವ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದಾದರೊಂದು ಪದವಿ ಪಡೆದಿರಬೇಕು. ಅಭ್ಯರ್ಥಿಯು ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಅಥವಾ 3(ಬಿ) ಗೆ ಸೇರಿರಬೇಕು. ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ–ಪ್ರವರ್ಗ1, ಪ್ರವರ್ಗ 2(ಎ), 3(ಎ) ಮತ್ತು 3(ಬಿ) ಗಳಿಗೆ 5 ಲಕ್ಷ ರೂ. ನಿಗದಿಪಡಿಸಲಾಗಿದೆ. ಅಭ್ಯರ್ಥಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಗಳಲ್ಲಿ ಗಳಿಸಿದ ಅಂಕಗಳು, ಪ್ರವರ್ಗ ಹಾಗೂ ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಪರೀಕ್ಷಾ ಕೇಂದ್ರಗಳು, ದಿನಾಂಕ ಮತ್ತು ಸಮಯವನ್ನು ನಂತರದ ದಿನಗಳಲ್ಲಿ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಆಸಕ್ತರು ಅರ್ಜಿಯನ್ನು ಆನ್‌ಲೈನ್ ಮೂಲಕ ಜೂನ್ 15ರೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ https://bcwd.karnataka.gov.in ಅಥವಾ sevasindhuservices.karnataka.gov.in.

# ಶಸ್ತ್ರಾಸ್ತ್ರ, ಮದ್ದುಗುಂಡು ಹೊಂದಿದ್ದ ಮೂವರ ಬಂಧನ

**ಜಮ್‌ಶೆಡ್‌ಪುರ, ಜೂ. 3**– ಜಾರ್ಖಂಡ್‌ನ ಜಮ್‌ಶೆಡ್‌ಪುರ ನಗರದಲ್ಲಿ ಮೂವರನ್ನು ಬಂಧಿಸಲಾಗಿದೆ ಮತ್ತು ಅವರ ಬಳಿಯಿದ್ದ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಖಚಿತ ಸುಳಿವಿನ ಮೇರೆಗೆ ಕಾದ್ಮಾ ಪೊಲೀಸ್ ಠಾಣೆ ಪ್ರದೇಶದ ಖಾರ್ಕೈ ನದಿಯ ಪಕ್ಕದಲ್ಲಿರುವ ರಾಮನಗರದ ಮೆರೈನ್ ಡ್ರೈವ್ ರಸ್ತೆಯ ಮೇಲೆ ದಾಳಿ ನಡೆಸಿದ ಪೊಲೀಸರು, ತಪ್ಪಿಸಿಕೊಳ್ಳಲು ಯತ್ನಿಸುತ್ತಿದ್ದ ಮೂವರನ್ನು ಬೆನ್ನಟ್ಟಿ ಬಂಧಿಸಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ನಗರ) ಕುಮಾರ್ ಶಿವಶಿಶ್ ತಿಳಿಸಿದ್ದಾರೆ.

ಶಸ್ತ್ರಾಸ್ತ್ರ ವ್ಯಾಪಾರಿ ಶಾರುಖ್ ಖಾನ್ (29) ಅವರಿಂದ ಬಂದೂಕು ಖರೀದಿಸಲು ಸ್ಥಳಕ್ಕೆ ಬಂದಿದ್ದರು. ಮೂವರಲ್ಲಿ, ಲಲಿತ್ ಯಾದವ್ (33) ಮತ್ತು ರಾಕೇಶ್ ಕುಮಾರ್ (30) ಎಂದು ಗುರುತಿಸಲಾದ ಇಬ್ಬರು ಖರೀದಿದಾರರು ಪೊಲೀಸರು ಎರಡು ದೇಶೀಯ ನಿರ್ಮಿತ ಪಿಸ್ತೂಲ್ ಗಳು ಮತ್ತು ಮೂರು ಕಾರ್ಟ್ರಿಡ್ಜ್ ಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಅವರು ಹೇಳಿದರು.

ಖಾನ್ ಕ್ರಿಮಿನಲ್ ಹಿನ್ನೆಲೆಗಳನ್ನು ಹೊಂದಿದ್ದು, ಅವರ ವಿರುದ್ಧ ಈಗಾಗಲೇ ಪ್ರಕರಣ ದಾಖಲಿಸಲಾಗಿದೆ ಎಂದು ಎಸ್‌ಪಿ ಹೇಳಿದರು. ಶಸ್ತ್ರಾಸ್ತ್ರಗಳ ಮೂಲವನ್ನು ಕಂಡುಹಿಡಿಯಲು ಪೊಲೀಸ್ ತನಿಖೆ ನಡೆಯುತ್ತಿದೆ ಎಂದು ಅವರು ಹೇಳಿದರು.ಶಸ್ತ್ರಾಸ್ತ್ರ ಕಾಯ್ದೆಯ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ಹೇಳಿದರು.

# ಕರೆಕಲ್‌ನಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ: ನೂರಾರು ಜನರಿಗೆ ಪ್ರಯೋಜನ

**ಯುವ ಮಾರ್ಗ ಸುದ್ದಿ**

**ರಾಯಚೂರು, ಜೂ.3**– ತಾಲೂಕಿನ ಕಾಡ್ಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರೆಕಲ್ ಗ್ರಾಮದಲ್ಲಿ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್, ಲೈನ್ ಸ್ಟೋನ್ ಸಂಸ್ಥೆ ಮತ್ತು ಭಾರತೀಯ ಕುಟುಂಬ ಯೋಜನಾ ಸಂಘ, ರಾಯಚೂರು ಶಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಸಮುದಾಯದವರಿಗಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು.



ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ. ರಾಜಶೇಖರ್, ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ವಿವಿಧ ಕಾಯಿಲೆಗಳ ಬಗ್ಗೆ ಎಚ್ಚರಿಕೆ ನೀಡಿದರು. ಮಿತ ಆಹಾರ ಸೇವನೆ, ಮದ್ಯಪಾನ ಮತ್ತು ಧೂಮಪಾನದಂತಹ ದುಶ್ಚಟಗಳು ಮನುಷ್ಯನ ಆಯುಷ್ಯವನ್ನು ಕುಗ್ಗಿಸುತ್ತವೆ ಎಂದು ಅವರು ಹೇಳಿದರು. ಮಧುಮೇಹ ಮತ್ತು ರಕ್ತದೊತ್ತಡದಂತಹ ಕಾಯಿಲೆಗಳ ಚಿಕಿತ್ಸೆಗಾಗಿ ಜನರು ಹಣವನ್ನು ಮೀಸಲಿಡುವ ಪರಿಸ್ಥಿತಿ ಬಂದಿದೆ. ಇಂತಹ ಸಮಯದಲ್ಲಿ, ಸಂಘ ಸಂಸ್ಥೆ ಗಳು ಆಯೋಜಿಸುವ ಉಚಿತ ಶಿಬಿರಗಳು ಬಡವರಿಗೆ ಮತ್ತು ದೊಡ್ಡ ನಗರಗಳಿಗೆ ಹೋಗಲು ಸಾಧ್ಯವಾಗದವರಿಗೆ ತುಂಬಾ ಪ್ರಯೋಜನಕಾರಿ ಎಂದು ಅವರು ಅಭಿಪ್ರಾಯಪಟ್ಟರು. ಶಿಬಿರ ಆಯೋಜಿಸಿದ ಎಲ್ಲಾ ಸಂಸ್ಥೆಗಳಿಗೂ ಡಾ. ರಾಜಶೇಖರ್ ಧನ್ಯವಾದ ಅರ್ಪಿಸಿದರು.

ಭಾರತೀಯ ಕುಟುಂಬ ಯೋಜನಾ ಸಂಘದ ವೈದ್ಯಾಧಿಕಾರಿ ಡಾ.ಪ್ರಿಯಾಂಕಾ ಮಾತನಾಡಿ, ಮಹಿಳೆಯರ ವೈಯಕ್ತಿಕ ಸ್ವಚ್ಛತೆ, ಕುಟುಂಬ ಯೋಜನೆ, ಮಕ್ಕಳ ಪಾಲನೆ ಮತ್ತು ಜನಸಂಖ್ಯಾ ನಿಯಂತ್ರಣದ ಬಗ್ಗೆ ಮಾಹಿತಿ ನೀಡಿದರು. "ಗಂಡಾಗಲಿ ಹೆಣ್ಣಾಗಲಿ, ಇಬ್ಬರು ಮಕ್ಕಳಿದ್ದರೆ ಇಡೀ ಕುಟುಂಬ ಸಂತೋಷದಿಂದ ಇರಲು ಸಾಧ್ಯ," ಎಂದು ಅವರು ಹೇಳಿದರು.

ಸ್ವಾಮಿ ವಿವೇಕಾನಂದ ಸಂಸ್ಥೆಯ ವ್ಯವಸ್ಥಾಪಕರಾದ ಸುರೇಶ ಮಾತನಾಡಿ, ತಮ್ಮ ಸಂಸ್ಥೆಯು ಕಳೆದ ಹತ್ತು ವರ್ಷಗಳಿಂದ ಸಮಾಜ ಸೇವಾ ಕಾರ್ಯಕ್ರಮಗಳಲ್ಲಿ ತೊಡಗಿದೆ. ನೀರು, ನೈರ್ಮಲ್ಯ, ಶೌಚಾಲಯ ಬಳಕೆ ಮತ್ತು ಶುದ್ಧ ಕುಡಿಯುವ ನೀರಿನ ಬಗ್ಗೆ ನೂರಾರು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಗ್ರಾಮೀಣ ಭಾಗದ ಜನರಿಗೆ ಸ್ಥಳದಲ್ಲೇ ಆರೋಗ್ಯ ತಪಾಸಣೆ ಮಾಡಿ ಸಹಾಯ ಮಾಡುವ ಉದ್ದೇಶದಿಂದ ಈ ಶಿಬಿರವನ್ನು ಆಯೋಜಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಮಲ್ಲಪ್ಪ ಗೌಡ, ವಿಶ್ವನಾಥ ರೆಡ್ಡಿ, ಗ್ರಾಮ ಪಂಚಾಯತ್ ಸದಸ್ಯರಾದ ಅರುಣ್ ಪಾಟೀಲ್, ರಾಘವೇಂದ್ರ, ಗಣೇಶ್, ಗ್ರಾಮ ಪಂಚಾಯತ್ ಕಾರ್ಯದರ್ಶಿ ಈರಮ್ಮ, ಎಎನ್‌ಎಂ, ಎಫ್‌ಪಿಎ ಸಂಯೋಜಕರಾದ ಹನುಮೇಶ್, ವಿನಾಯಕ, ಆರ್. ಲಿಂಗಪ್ಪ, ರಾಜೇಶ್, ವಾಟರ್ ಮ್ಯಾನ್ ಶಿವಲಿಂಗಪ್ಪ, ಜಂಬಣ್ಣ ಇದ್ದರು.

# ಮನೆಯಲ್ಲಿ ಶುಚಿತ್ವ ಕಾಪಾಡಲು ಡಿಎಚ್‌ಓ ಡಾ.ಸುರೇಂದ್ರ ಬಾಬು ಸಲಹೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.3**–ಮನೆಯೊಳಗೆ, ಹೊರಗೆ ಸ್ವಚ್ಛತೆ ಕಾಪಾಡಿಕೊಳ್ಳಿ, ಕೈಗಳನ್ನು ಸೋಪಿನಿಂದ ತೊಳೆದು ಶುಚಿಯಾಗಿಟ್ಟುಕೊಳ್ಳಬೇಕು. ನಿಮ್ಮ ಆರೋಗ್ಯ ಚೆನ್ನಾಗಿದ್ದರೆ, ಸುತ್ತಮುತ್ತಲಿನ ಆರೋಗ್ಯವೂ ಉತ್ತಮವಾಗಿರುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಸೋಮವಾರ ದಂದು ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ, ಡೆಂಗೆ ರೋಗ ಹರಡುವ ವಿಧಾನ ಹಾಗೂ ಅದರಿಂದಾಗುವ ಅಪಾಯದ ಬಗ್ಗೆ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಿಬ್ಬಂದಿಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದಲ್ಲಿ ದಿನೇದಿನೆ ಕೋವಿಡ್–19ರ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಈ ಕುರಿತು ವಿದ್ಯಾರ್ಥಿಗಳ ಬಗ್ಗೆ ಶಿಕ್ಷಕರು ಹೆಚ್ಚಿನ ಕಾಳಜಿ ವಹಿಸಬೇಕು. ರಸ್ತೆ, ಸಾರ್ವಜನಿಕ ಪ್ರದೇಶ ಅಥವಾ ಜನರು ವಾಸಿಸುವ ಪ್ರದೇಶಗಳಲ್ಲಿ ತ್ಯಾಜ್ಯವನ್ನು ಎಸೆಯಬಾರದು. ತ್ಯಾಜ್ಯವನ್ನು ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಬೇಕು ಎಂದು ತಿಳಿಸಿದರು.

ವರ್ಷದ ಜೂನ್ ತಿಂಗಳನಿಂದ ಅಕ್ಟೋಬರ್ ತಿಂಗಳಲ್ಲಿ ಈಡಿಸ್ ಸೊಳ್ಳೆಗಳು ಉಲ್ಬಣಗೊಳ್ಳುತ್ತದೆ. ಈ ಈಡಿಸ್ ಸೊಳ್ಳೆಗಳು ಹಗಲು ಹೊತ್ತು ಕಚ್ಚುತ್ತವೆ. ಈ ಸೊಳ್ಳೆಯಿಂದ ಡೆಂಗಿ, ಚಿಕೂನ್ ಗುನ್ಯಾ, ಝೀಕಾ, ಹಳದಿ ಜ್ವರ ಹರಡುತ್ತದೆ. ಅನಾಫಿಲಿಸ್ ಸೊಳ್ಳೆಗಳು ರಾತ್ರಿ ಸಮಯದಲ್ಲಿ ಕಚ್ಚುತ್ತವೆ. ಈ ಸೊಳ್ಳೆಯಿಂದ ಮಲೇರಿಯಾ ಹರಡುತ್ತದೆ. ಕ್ಯೂಲೆಕ್ಸ್ ಸೊಳ್ಳೆ ಮುಂಜಾನೆ ಹಾಗೂ ಮುಸ್ಸಂಜೆಯ ಸಮಯದಲ್ಲಿ ಕಚ್ಚುತ್ತವೆ. ಇವುಗಳಿಂದ ಜ್ವರ ಹರಡುತ್ತದೆ ಎಂದರು.

ಈ ವೇಳೆ ಜಿಲ್ಲಾ ರೋಗ ವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಾದ ಡಾ.ಚಂದ್ರಶೇಖಯ್ಯ ಸ್ವಾಮಿ ಅವರು ಮಾತನಾಡಿ, ಶಿಕ್ಷಣ ಸಂಸ್ಥೆಗಳಲ್ಲಿನ ಅಡುಗೆ ಕೋಣೆಗಳು, ಶುಚಿಗೊಳಿಸುವ ಉದ್ದೇಶಗಳಿಗಾಗಿ ವಿವಿಧ ಚಟುವಟಿಕೆಗಳಿಗಾಗಿ ಬಳಸುವ ಪಾತ್ರೆಗಳು, ಸಿಮೆಂಟ್ ಟ್ಯಾಂಕಗಳು, ಓವರ್ ಹೆಡ್ ಟ್ಯಾಂಕಗಳನ್ನು ಕಾಲಕಾಲಕ್ಕೆ ಶುಚಿಗೊಳಿಸಬೇಕು ಎಂದು ಸಲಹೆ ಮಾಡಿದರು.

**ಪ್ರಾತ್ಯಕ್ಷಿಕೆ:** ಸೊಳ್ಳೆ ಉತ್ಪತ್ತಿ ಹೇಗಾಗುತ್ತದೆ, ಯಾವ ಸ್ಥಳಗಳಲ್ಲಿ ಸಂತಾನೋತ್ಪತ್ತಿ ಹೆಚ್ಚಾಗಿರುತ್ತದೆ, ಹೊರಾಂಗಣ ಹಾಗೂ ಒಳಾಂಗಣದಲ್ಲಿ ಯಾವ ರೀತಿಯ ರಾಸಾಯನಿಕಗಳನ್ನು ಸಿಂಪಡಿಸಬೇಕು, ಮುನ್ನೆಚ್ಚರಿಕೆ ವಿಧಾನ ಹೇಗೆ ಅನುಸರಿಸಬೇಕು ಎಂಬುದರ ಬಗ್ಗೆ ಇದೆ ವೇಳೆ ಪ್ರಾತ್ಯಕ್ಷಿಕೆಗಳ ಮೂಲಕ ತೋರಿಸಲಾಯಿತು.

ಇದೇ ಸಂದರ್ಭದಲ್ಲಿ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀನಿವಾಸ, ಹಿರಿಯ ಆರೋಗ್ಯ ನಿರೀಕ್ಷಕ ಮಾನಪ್ಪ, ಜಿಲ್ಲಾ ಆರೋಗ್ಯ ಮತ್ತು ಶಿಕ್ಷಣ ಉಪ ಅಧಿಕಾರಿ ಬಸಯ್ಯ, ತಾಲೂಕು ಆರೋಗ್ಯ ಮತ್ತು ಶಿಕ್ಷಣಾಧಿಕಾರಿ ಸರೋಜಾ, ಎಂಟಿಎಸ್ ಸಂಧ್ಯಾ ನಾಯಕ, ಸಹ ಶಿಕ್ಷಕಿ ಕಸ್ತೂರಿ, ದೈಹಿಕ ಶಿಕ್ಷಣ ಶಿಕ್ಷಕಿ ರಾಧಿಕಾ, ವಿಜ್ಞಾನ ಶಿಕ್ಷಕಿ ಅನಿತಾ, ಆರೋಗ್ಯ ಅಧಿಕಾರಿ ಅರುಣ್ ಇದ್ದರು.

# ಅಬಕಾರಿ ಇಲಾಖೆ ಅಧಿಕಾರಿಗಳ ದಾಳಿ : ಕಳ್ಳಬಟ್ಟಿ ಬೆಲ್ಲದ ಕೊಳೆ ನಾಶ, 3 ಪ್ರಕರಣ ದಾಖಲು

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.3**– ತಾಲೂಕಿನ ಈಚನಾಳ ಗ್ರಾಮದ ಎರಡು ತಾಂಡಾ ಗಳಲ್ಲಿ ಅಬಕಾರಿ ಅಧಿಕಾರಿಗಳು ದಾಳಿ ನಡೆಸಿ 40 ಲೀಟರ್ ಬೆಲ್ಲದ ಕೊಳೆ ಮತ್ತು 8 ಲೀಟರ್ ಅನ್ ಕ್ಲೈಮೆಡ್ ಕಳ್ಳಭಟ್ಟಿ ಸರಾಯಿ ಪತ್ತೆ ಹಚ್ಚಿ ಸ್ಥಳದಲ್ಲಿಯೆ ನಾಶಪಡಿಸಿದ್ದಾರೆ.

ಅಬಕಾರಿ ನಿರೀಕ್ಷಕರಾದ ಲಕ್ಷ್ಮೀ ದೇವಿ ಅವರ ಮಾರ್ಗದರ್ಶನದಂತೆ , ಮಹ್ಮದ ಹುಸೇನ್ ಉಪ ನಿರೀಕ್ಷಕರು ಇವರ ನೇತೃತ್ವದಲ್ಲಿ ತಾಲ್ಲೂಕಿನ ಈಚನಾಳ ತಾಂಡಾ 1 ಮತ್ತು 2 ರಲ್ಲಿ ದಾಳಿ ನಡೆಸಿದಾಗ , ತಾಂಡಾಗಳ ಹೊರ ವಲಯದಲ್ಲಿ 40 ಲೀಟರ್ ಬೆಲ್ಲದ ಕೊಳೆ ಮತ್ತು 08 ಲೀಟರ್ ಕಳ್ಳ ಭಟ್ಟಿ ಪತ್ತೆಯಾಗಿದ್ದು,ಆರೋಪಿಯು ಪರಾರಿಯಾಗಿದ್ದು ಸುಳಿವು ಪತ್ತೆಯಾಗಿಲ್ಲ ಎಂದು ತಿಳಿದು ಬಂದಿದೆ.

**3 ಪ್ರಕರಣ ದಾಖಲು** : ತಾಲುಕೀನ ಈಚನಾಳ, ಹಾಲಭಾವಿ,ಚಿತ್ತಾಪುರ ಗ್ರಾಮಗಳಲ್ಲಿ ಸಾರ್ವಜನಿಕವಾಗಿ ಅಕ್ರಮ ಮದ್ಯ ಮಾರಾಟ ಮಾಡುತ್ತಿರುವ ಮಾಹಿತಿ ಮೇರೆಗೆ



ಕಿರಾಣಿ,ಹಾಗೂ ಪಾನ ಶಾಪ್ ಗಳಲ್ಲಿ ದಿಢೀರ್ ದಾಳಿ ಮಾಡಿ ಮೂರು ಕಡೆಗಳಲ್ಲಿ ಪ್ರತ್ಯೇಕವಾಗಿ ಒಂದೊಂದು ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಅಬಕಾರಿ ಮೂಲಗಳಿಂದ ಮಾಹಿತಿ ತಿಳಿದು ಬಂದಿದೆ. ಈ ವೇಳೆ ಅಬಕಾರಿ ಮುಖ್ಯಪೇದೆ ಸಂಗಪ್ಪ,ಗೃಹ ರಕ್ಷಕ ಸಿಬ್ಬಂದಿಗಳಾದ ಮಹಾಂತೇಶ, ಸೋಮಪ್ಪ, ಪದ್ಮಾವತಿ, ಅಮರೇಶ ಇದ್ದರು.

# ಜಗನ್ನಾಥನ ರಥಯಾತ್ರೆಗೆ ಒಡಿಶಾ ಪೊಲೀಸರಿಂದ ಭಾರಿ ಭದ್ರತೆ



**ಕಟಕ್, ಜೂ. 3**– ಈ ತಿಂಗಳ ಕೊನೆಯಲ್ಲಿ ನಡೆಯಲಿರುವ ಜಗನ್ನಾಥ ಸ್ವಾಮಿಯ ವಾರ್ಷಿಕ ರಥಯಾತ್ರೆಗೆ ಒಡಿಶಾ ಪೊಲೀಸರು ಬೃಹತ್ ಭದ್ರತಾ ವ್ಯವಸ್ಥೆಗಳನ್ನು ಸಿದ್ಧಪಡಿಸಿದ್ದಾರೆ. ಪೊಲೀಸ್ ಮಹಾನಿರ್ದೇಶಕ ವೈ ಬಿ ಖುರಾನಿಯಾ ಅವರು, ಗುಪ್ತಚರ, ಕಾನೂನು ಮತ್ತು ಸುವ್ಯವಸ್ಥೆ, ರೈಲು ಮತ್ತು ಕರಾವಳಿ ಭದ್ರತೆಯನ್ನು ನೋಡಿಕೊಳ್ಳುವವರು ಸೇರಿದಂತೆ ಉನ್ನತ ಪೊಲೀಸ್ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಭೆ ನಡೆಸಿದರು. ಸಂಭವನೀಯ ಕಾಲ್ತುಳಿತದ ಪರಿಸ್ಥಿತಿ, ಅಪರಾಧಿಗಳು ಮತ್ತು ಭಕ್ತರ ಸೌಲಭ್ಯಗಳ ವಿರುದ್ಧ ಚಾಲನೆ ಮುಂತಾದ ಘಟನೆಗಳ ಬಗ್ಗೆ ವಿಶೇಷ ಗಮನ ಹರಿಸುವಂತೆ ಅವರು ಆದೇಶಿಸಿದರು.

ಕೆ9 ಸ್ಕ್ವಾಡ್ ಅಥವಾ ಶ್ವಾನ ದಳದ ನಿಯೋಜನೆಯ ಬಗ್ಗೆಯೂ ಡಿಜಿಪಿ ಒತ್ತಿ ಹೇಳಿದರು ಎಂದು ಅಧಿಕಾರಿ ಹೇಳಿದರು.ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಅವರು ಎನ್‌ಡಿಎ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳನ್ನು ರಥಯಾತ್ರೆಯ ಸಮಯದಲ್ಲಿ ಪುರಿಗೆ ಭೇಟಿ ನೀಡಲು ಆಹ್ವಾನಿಸಿರುವುದರಿಂದ ಹಲವಾರು ಕೇಂದ್ರ ಸಚಿವರು ಮತ್ತು ಅನೇಕ ವಿವಿಐಪಿಗಳು ರಥಯಾತ್ರೆಯ ಸಮಯದಲ್ಲಿ ಪುರಿಗೆ ಭೇಟಿ ನೀಡುವ ಸಾಧ್ಯತೆಯಿದೆ.

ಕಳೆದ ವರ್ಷ ರಾಷ್ಟ್ರಪತಿ ದ್ರೌಪದಿ ಮುರ್ಮು ಪುರಿಯಲ್ಲಿ ರಥಯಾತ್ರೆ ಉತ್ಸ ವವನ್ನು ವೀಕ್ಷಿಸಿದ್ದರು.ಜಿಲ್ಲಾ ಆಡಳಿತದ ಸಹಯೋಗದೊಂದಿಗೆ ಸುಗಮ ಸಂಚಾರ, ಬ್ಯಾರಿಕೇಡ್ ವ್ಯವಸ್ಥೆ ಮತ್ತು ವಿವಿಧ ಸಮಸ್ಯೆಗಳ ತ್ವರಿತ ಪರಿಹಾರವನ್ನು ಖಚಿತಪಡಿಸಿಕೊಳ್ಳಲು ಡಿಜಿಪಿ ನಿರ್ದೇಶನ ನೀಡಿದರು. ತುರ್ತು ಪರಿಸ್ಥಿತಿಗಳನ್ನು ನಿಭಾಯಿಸುವ ವಿಷಯದ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಗಿದೆ ಎಂದು ಅಧಿಕಾರಿ ಹೇಳಿದರು.

ನಗರದ ವಿವಿಧ ಪ್ರಮುಖ ಸ್ಥಳಗಳಲ್ಲಿ ಸಿಸಿಟಿವಿ ಅಳವಡಿಕೆ, ರಸ್ತೆ ವಿಭಜಕಗಳು, ಸಂಚಾರ ನಿರ್ವಹಣೆಗಾಗಿ ಸಂಚಾರ ವಲಯಗಳು, ನಗರದ ವಿವಿಧ ಸ್ಥಳಗಳಲ್ಲಿ ಸಾಕಷ್ಟು ಪಾರ್ಕಿಂಗ್ ವ್ಯವಸ್ಥೆಗಳು, ಕ್ರಮಬದ್ಧ ಸಂಚಾರ ವ್ಯವಸ್ಥೆಯ ನಿರ್ವಹಣೆ ಮತ್ತು ಇತರ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಅದೇ ರೀತಿ, ಸಮುದ್ರ ತೀರದಲ್ಲಿ ಪೊಲೀಸರಿಂದ ಗಸ್ತು ತಿರುಗುವುದು ಮತ್ತು ಅಲ್ಲಿ ತಾತ್ಕಾಲಿಕ ಪೊಲೀಸ್ ಠಾಣೆಗಳನ್ನು ತೆರೆಯುವ ಬಗ್ಗೆಯೂ ವಿವರವಾಗಿ ಚರ್ಚಿಸಲಾಯಿತು.ಸುಮಾರು ಹದಿನೈದು ದಿನಗಳ ಕಾಲ ಆಚರಿಸಲಾಗುವ ರಥಯಾತ್ರೆ ಉತ್ಸ ವದ ಸಮಯದಲ್ಲಿ ಒಡಿಶಾ ಪೊಲೀಸರು ಲಕ್ಷಾಂತರ ಭಕ್ತರ ಸಭೆಯನ್ನು ನಿರೀಕ್ಷಿಸುತ್ತಾರೆ.

ಜೂನ್ 11 ರಂದು ಭಗವಂತನ ಸ್ಥಾನೋತ್ಸವ ಸ್ನಾನ ಯಾತ್ರೆ ನಡೆಯಲಿದ್ದು, ಜೂನ್ 27 ರಂದು ರಥಯಾತ್ರೆ ಮತ್ತು ರಥ ಎಳೆಯುವಿಕೆಯನ್ನು ನಿಗದಿಪಡಿಸಲಾಗಿದೆ. ರಥ ಎಳೆಯುವ ಒಂದು ದಿನ ಮೊದಲು ಜೂನ್ 26 ರಂದು ಅನಬ ಜೇಬನ್ ದರ್ಶನಲ್ಲಿ ದಿನದಂದು (ಹೊಸ ಮುಖ ದರ್ಶನ) ಪುರಿಯಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರುತ್ತಾರೆ.

ಜುಲೈ 1 ರಂದು ಹೇರಾ ಪಂಚಮಿ ಉತ್ಸವ ನಡೆಯಲಿದ್ದು, ಜುಲೈ 4 ರಂದು ಸಂಧ್ಯಾ ದರ್ಶನ ಮತ್ತು ಜುಲೈ 5 ರಂದು ಬಹುಧ ಯಾತ್ರೆ (ರಿಟರ್ನ್ ರಥೋತ್ಸವ) ನಡೆಯಲಿದೆ.ಜುಲೈ 6 ರಂದು ಸುನ ಬೇಷ (ರಥದ ಮೇಲೆ ಚಿನ್ನದ ವೇಷಭೂಷಣ), ಜುಲೈ 7 ರಂದು ಅಧರ್ಪಣ (ಪಾನೀಯ ಅರ್ಪಣೆ) ಆಚರಣೆ ಮತ್ತು ಅಂತಿಮವಾಗಿ ಜುಲೈ 8 ರಂದು ನೀಲಾದ್ರಿ ಬಿಜೆ (ದೇವಸ್ಥಾನಕ್ಕೆ ಹಿಂತಿರುಗುವಿಕೆ) ರಥಯಾತ್ರೆಯ ಉತ್ಸ ವದ ಅಂತ್ಯವನ್ನು ಸೂಚಿಸುತ್ತವೆ.

# ಅಕ್ರಮವಾಗಿ ಗಾಂಜಾ ಮಾರಾಟ:ಇಬ್ಬರ ಬಂಧನ




**ಬಳ್ಳಾರಿ: ಜೂ.3**– ನಗರದ ಕೌಲ್ ಬಜಾರ್ ವ್ಯಾಪ್ತಿಯಲ್ಲಿ ಅಕ್ರಮ ವಾಗಿ ಗಾಂಜಾ ಮಾರಾಟ ಮಾಡುತ್ತಿದ್ದ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ನೂರ್ ಮಹಮ್ಮದ್ (27) ಮತ್ತು ಸಿ. ಮಹಮ್ಮದ್ ಉಜೈರ್ (27) ಬಂಧಿತರು.

ಇವರಿಂದ ರೂ 88 ಸಾವಿರ ಮೌಲ್ಯದ 1.78 ಕೆ.ಜಿ ಗಾಂಜಾ ಮತ್ತು ರೂ 1900 ನಗದು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೋಭಾರಾಣಿ ವಿ.ಜೆ ಪತ್ರೀಕಾ ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**